ಸತ್ಯ ಮತ್ತು ಧೈರ್ಯದ ಧ್ವನಿ

# ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 100 | ರಾಯಚೂರು Raichur 02-10-2026 | ಶುಕ್ರವಾರ Friday | ಪುಟ : Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ Editor: Gururaja K 98863 85685




## ನಿತೀಶ್ ಕುಮಾರ್ ಇಂಡಿಯಾ ಒಕ್ಕೂಟ ತೊರೆದ ವಿಚಾರ ಸಿಡಬ್ಲ್ಯುಸಿಯಲ್ಲಿ ಚರ್ಚೆ; ಸೋನಿಯಾದಿಗ್ವಿಜಯ್ ಭಿನ್ನಮತ



ನವದೆಹಲಿ: 2024ರ ಲೋಕಸಭಾ ಚುನಾವಣೆಗೂ ಮುನ್ನ ಜೆಡಿಯು ನಾಯಕ ನಿತೀಶ್ ಕುಮಾರ್ ಅವರು ವಿರೋಧ ಪಕ್ಷಗಳ ಇಂಡಿಯಾ ಒಕ್ಕೂಟವನ್ನು ತೊರೆದು ಮತ್ತೆ ಎನ್‌ಡಿಎ ಮೈತ್ರಿಕೂಟಕ್ಕೆ ಮರಳಿದ್ದ ವಿಚಾರ ಕಾಂಗ್ರೆಸ್ ಕಾರ್ಯಕಾರಿ ಸಮಿತಿ (ಸಿಡಬ್ಲ್ಯುಸಿ) ಸಭೆಯಲ್ಲಿ ಮತ್ತೆ ಚರ್ಚೆಗೆ ಬಂದಿದೆ. ನಿತೀಶ್ ಅವರನ್ನು ಒಕ್ಕೂಟದಲ್ಲೇ ಉಳಿಸಿಕೊಳ್ಳಬೇಕಿತ್ತು ಎಂದು ಹಿರಿಯ ಕಾಂಗ್ರೆಸ್ ನಾಯಕ ದಿಗ್ವಿಜಯ್ ಸಿಂಗ್ ಅಭಿಪ್ರಾಯಪಟ್ಟರೆ, ಅವರು ಹೊರಹೋದದ್ದು ಒಕ್ಕೂಟದ ದೃಷ್ಟಿಯಿಂದ ಒಳ್ಳೆಯದೇ ಆಯಿತು ಎಂದು ಸೋನಿಯಾ ಗಾಂಧಿ ಪ್ರತಿಕ್ರಿಯಿಸಿದ್ದಾರೆ ಎಂದು ಕಾಂಗ್ರೆಸ್ ಮೂಲಗಳನ್ನು ಉಲ್ಲೇಖಿಸಿ ಹಲವು ಮಾಧ್ಯಮಗಳು ವರದಿ ಮಾಡಿವೆ.

ಮಂಗಳವಾರ ನಡೆದ ಸಿಡಬ್ಲ್ಯುಸಿ ಸಭೆಯಲ್ಲಿ ಪಕ್ಷದ ರಾಜಕೀಯ ಕಾರ್ಯತಂತ್ರ, ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR) ಸೇರಿದಂತೆ ಹಲವು ವಿಷಯಗಳ ಕುರಿತು ಚರ್ಚೆ ನಡೆಯುವ ವೇಳೆ ನಿತೀಶ್ ಕುಮಾರ್ ಅವರ 2024ರ ರಾಜಕೀಯ ನಿರ್ಧಾರವೂ ಪ್ರಸ್ತಾಪವಾಯಿತು. "ನಿತೀಶ್ ಕುಮಾರ್ ಅವರನ್ನು ಇಂಡಿಯಾ ಒಕ್ಕೂಟದಿಂದ ಹೊರಹೋಗಲು ಬಿಡಬಾರದಿತ್ತು; ಅವರು ಒಕ್ಕೂಟದಲ್ಲೇ ಉಳಿದಿದ್ದರೆ ರಾಜಕೀಯ ಪರಿಸ್ಥಿತಿ ವಿಭಿನ್ನವಾಗಿರಬಹುದಿತ್ತು" ಎಂದು ದಿಗ್ವಿಜಯ್ ಸಿಂಗ್ ಅಭಿಪ್ರಾಯಪಟ್ಟಿದ್ದಾರೆ ಎಂದು ವರದಿಯಾಗಿದೆ.

ಆದರೆ ಈ ಅಭಿಪ್ರಾಯಕ್ಕೆ ಸೋನಿಯಾ ಗಾಂಧಿ ಸಹಮತ ವ್ಯಕ್ತಪಡಿಸಲಿಲ್ಲ ಎನ್ನಲಾಗಿದೆ. ನಿತೀಶ್ ಕುಮಾರ್ ಅವರು ಒಕ್ಕೂಟದಿಂದ ಹೊರಬರುವ ಮಾರ್ಗಗಳನ್ನು ಹುಡುಕುತ್ತಿದ್ದರು ಮತ್ತು ಅವರು ಹೊರಹೋಗಿದ್ದು ಒಳ್ಳೆಯದೇ ಆಯಿತು ಎಂದು ಸೋನಿಯಾ ಗಾಂಧಿ ಹೇಳಿರುವುದಾಗಿ ಸಭೆಯ ಕುರಿತು ತಿಳಿದಿರುವ ಮೂಲಗಳು ಮಾಧ್ಯಮಗಳಿಗೆ ಮಾಹಿತಿ ನೀಡಿವೆ. ಕೆಲವು ವರದಿಗಳಲ್ಲಿ ಅವರ ವಿರುದ್ಧ ಇನ್ನಷ್ಟು ಕಠಿಣ ಪದಗಳನ್ನು ಬಳಸಲಾಗಿದೆ ಎಂದು ಹೇಳಲಾಗಿದೆಯಾದರೂ, ಅವುಗಳನ್ನು ಕಾಂಗ್ರೆಸ್ ಅಧಿಕೃತ ಹೇಳಿಕೆಯಲ್ಲಿ ದೃಢಪಡಿಸಿರುವ ಮಾಹಿತಿ ಲಭ್ಯವಿಲ್ಲ.

2022ರಲ್ಲಿ ಬಿಜೆಪಿಯೊಂದಿಗಿನ ಮೈತ್ರಿ ಮುರಿದಿದ್ದ ನಿತೀಶ್ ಕುಮಾ್ರ್, ಆರ್‌ಜೆಡಿ, ಕಾಂಗ್ರೆಸ್ ಹಾಗೂ ಎಡಪಕ್ಷಗಳ ಬೆಂಬಲದೊಂದಿಗೆ ಬಿಹಾರದಲ್ಲಿ ಹೊಸ ಸರ್ಕಾರ ರಚಿಸಿದ್ದರು. ನಂತರ ಬಿಜೆಪಿ ವಿರುದ್ಧ ರಾಷ್ಟ್ರೀಯ ಮಟ್ಟದಲ್ಲಿ ವಿರೋಧ ಪಕ್ಷಗಳನ್ನು ಒಂದೇ ವೇದಿಕೆಗೆ ತರುವ ಪ್ರಯತ್ನಗಳಲ್ಲಿ ಪ್ರಮುಖ ಪಾತ್ರ ವಹಿಸಿದರು. 2023ರ ಜೂನ್‌ನಲ್ಲಿ ಪಾಟ್ನಾದಲ್ಲಿ ನಡೆದ ವಿರೋಧ ಪಕ್ಷಗಳ ಮೊದಲ ಪ್ರಮುಖ ಸಭೆಯನ್ನು ಆಯೋಜಿಸುವಲ್ಲಿಯೂ ಅವರು ಮುಂಚೂಣಿಯಲ್ಲಿದ್ದರು. ಇದೇ ರಾಜಕೀಯ ಪ್ರಕ್ರಿಯೆ ಮುಂದೆ ಒಕ್ಕೂಟದ ರೂಪುಗೊಳ್ಳುವಿಕೆಗೆ ಕಾರಣವಾಯಿತು.

ಒಕ್ಕೂಟದ ಸಂಘಟನಾ ವ್ಯವಸ್ಥೆಯಲ್ಲಿ ನಿತೀಶ್ ಅವರಿಗೆ ಸಂಚಾಲಕ ಸ್ಥಾನ ನೀಡುವ ಕುರಿತು ಚರ್ಚೆಗಳು ನಡೆದಿದ್ದವು. 2024ರ ಜನವರಿಯಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಒಕ್ಕೂಟದ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿದ ಬಳಿಕ, ನಿತೀಶ್ ಅವರ ಹೆಸರನ್ನು ಸಂಚಾಲಕ ಸ್ಥಾನಕ್ಕೆ ಪ್ರಸ್ತಾಪಿಸಲಾಗಿತ್ತು. ಆದರೆ ಕೆಲವು ಮಿತ್ರಪಕ್ಷಗಳ ನಡುವೆ ಪೂರ್ಣ ಒಮ್ಮತ ಮೂಡದ ಹಿನ್ನೆಲೆಯಲ್ಲಿ ಆ ವಿಷಯ ಅಂತಿಮ ರೂಪ ಪಡೆಯಲಿಲ್ಲ ಎಂದು ವರದಿಯಾಗಿದೆ.

ಇದಾದ ಕೆಲವೇ ವಾರಗಳಲ್ಲಿ, 2024ರ ಜನವರಿ 28ರಂದು ನಿತೀಶ್ ಕುಮಾರ್ ಬಿಹಾರದ ಮಹಾಘಟಬಂಧನ ಸರ್ಕಾರದಿಂದ ಹೊರಬಂದು ಮತ್ತೆ ಬಿಜೆಪಿ ನೇತೃತ್ವದ ಎನ್‌ಡಿಎಗೆ ಸೇರಿದರು. ಬಳಿಕ ಬಿಜೆಪಿ ಬೆಂಬಲದೊಂದಿಗೆ ಅವರು ಮತ್ತೆ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ್ದರು. ಈ ಬೆಳವಣಿಗೆ ಲೋಕಸಭಾ ಚುನಾವಣೆಗೆ ಮುನ್ನ ವಿರೋಧ ಪಕ್ಷಗಳ ರಾಜಕೀಯ ಸಮೀಕರಣದ ಮೇಲೆ ಪರಿಣಾಮ ಬೀರಿತ್ತು.

ಸಿಡಬ್ಲ್ಯುಸಿ ಸಭೆಯಲ್ಲಿ ಸೋನಿಯಾ ಗಾಂಧಿ ಅವರು ನಿತೀಶ್ ಕುಮಾರ್ ಕುರಿತು ವ್ಯಕ್ತಪಡಿಸಿದ್ದಾರೆ ಎನ್ನಲಾದ ಅಭಿಪ್ರಾಯಕ್ಕೆ ಜೆಡಿಯು ನಾಯಕರಿಂದ ತೀವ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ಕೇಂದ್ರ ಸಚಿವ ಹಾಗೂ ಜೆಡಿಯು ಹಿರಿಯ ನಾಯಕ ರಾಜೀವ್ ರಂಜನ್ ಸಿಂಗ್ ಲಾಲನ್ ಅವರು ಸೋನಿಯಾ ಗಾಂಧಿಯವರ ವರದಿಯಾದ ಹೇಳಿಕೆಯನ್ನು ಆಕ್ಷೇಪಿಸಿದ್ದಾರೆ. "ನಿತೀಶ್ ಕುಮಾರ್ ಅವರನ್ನು ಜನರು ಪ್ರೀತಿಸುತ್ತಾರೆ; ಅವರಿಗೆ ಸೋನಿಯಾ ಗಾಂಧಿಯವರ ಪ್ರಮಾಣಪತ್ರದ ಅಗತ್ಯವಿಲ್ಲ" ಎಂದು ಅವರು ಪ್ರತಿಕ್ರಿಯಿಸಿದ್ದಾರೆ.

ಇದೇ ವೇಳೆ ಕಾಂಗ್ರೆಸ್ ಪಕ್ಷದ ಇತಿಹಾಸವನ್ನು ಉಲ್ಲೇಖಿಸಿದ ಲಾಲನ್ ಸಿಂಗ್, ತುರ್ತು ಪರಿಸ್ಥಿತಿಯ ಸಮಯದಲ್ಲಿ ಪ್ರಜಾಪ್ರಭುತ್ವಕ್ಕೆ ಧಕ್ಕೆ ತಂದ ಪಕ್ಷ ಕಾಂಗ್ರೆಸ್ ಎಂದು ಆರೋಪಿಸಿದರು. ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಪ್ರಜಾಪ್ರಭುತ್ವ ಬಲಗೊಂಡಿದೆ ಮತ್ತು ದೇಶ ಅಭಿವೃದ್ಧಿಯತ್ತ ಸಾಗುತ್ತಿದೆ ಎಂದು ಅವರು ಪ್ರತಿಪಾದಿಸಿದ್ದಾರೆ. ಇದು ಜೆಡಿಯು ನಾಯಕನ ರಾಜಕೀಯ ಪ್ರತಿಕ್ರಿಯೆಯಾಗಿದ್ದು, ಕಾಂಗ್ರೆಸ್ ಇದಕ್ಕೆ ವಿಭಿನ್ನ ನಿಲುವು ಹೊಂದಿದೆ.

ಜೆಡಿಯು ಕಾರ್ಯಾಧ್ಯಕ್ಷ ಸಂಜಯ್ ಕುಮಾರ್ ಝಾ ಕೂಡ ಪ್ರತಿಕ್ರಿಯಿಸಿ, ಇಂಡಿಯಾ ಒಕ್ಕೂಟದ ರಚನೆಯಲ್ಲಿ ನಿತೀಶ್ ಕುಮಾರ್ ಅವರ ಪಾತ್ರವನ್ನು ವಿರೋಧ ಪಕ್ಷಗಳು ಮರೆಯಬಾರದು ಎಂದು ಹೇಳಿದ್ದಾರೆ. ದೇಶದ ವಿವಿಧ ಭಾಗಗಳ ವಿರೋಧ ಪಕ್ಷದ ನಾಯಕರನ್ನು ಸಂಪರ್ಕಿಸಿ ಪಾಟ್ನಾದ ಸಭೆಗೆ ಒಗ್ಗೂಡಿಸುವಲ್ಲಿ ನಿತೀಶ್ ಪ್ರಮುಖ ಪಾತ್ರ ವಹಿಸಿದ್ದರು ಎಂದು ಅವರು ನೆನಪಿಸಿದ್ದಾರೆ.

ಈ ಬೆಳವಣಿಗೆಯೊಂದಿಗೆ 2024ರಲ್ಲಿ ಮುಕ್ತಾಯಗೊಂಡಿದ್ದ ನಿತೀಶ್ ಕುಮಾರ್‌ಇಂಡಿಯಾ ಒಕ್ಕೂಟದ ರಾಜಕೀಯ ಸಂಬಂಧ ಮತ್ತೆ ಚರ್ಚೆಗೆ ಬಂದಿದೆ. ಸಿಡಬ್ಲ್ಯುಸಿ ಒಳಗಿನ ಈ ಭಿನ್ನ ಅಭಿಪ್ರಾಯಗಳು ನಿತೀಶ್ ಅವರ ನಿರ್ಗಮನವು ವಿರೋಧ ಪಕ್ಷಗಳ ಚುನಾವಣಾ ತಂತ್ರದ ಮೇಲೆ ಎಷ್ಟು ಪರಿಣಾಮ ಬೀರಿತು ಎಂಬ ಪ್ರಶ್ನೆಯನ್ನು ಮತ್ತೊಮ್ಮೆ ಮುನ್ನೆಲೆಗೆ ತಂದಿವೆ.

## ಹಿರಿಯ ನಾಗರಿಕರನ್ನು ಗೌರವಿಸುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ: ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್

ರಾಯಚೂರು ಅ.01 (ಕರ್ನಾಟಕ ವಾರ್ತೆ): ಹಿರಿಯ ನಾಗರಿಕರು ನಮ್ಮ ಸಮಾಜದ ದಾರಿದೀಪ ಮತ್ತು ದೇಶದ ನಿಜವಾದ ಸಂಪತ್ತು. ಅವರನ್ನು ಗೌರವಿಸುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ ಎಂದು ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್ ಅವರು ಹೇಳಿದರು.




ಅಕ್ಟೋಬರ್ 01ರ ಗುರುವಾರ ದಂದು ನಗರದ ಕನ್ನಡ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ರಾಯಚೂರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ನಿವೃತ್ತಿ ನೌಕರರ ಸಂಘ ಹಾಗೂ ಹಿರಿಯ ನಾಗರೀಕರಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳು ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ಹಿರಿಯ ನಾಗರೀಕರ ದಿನಾಚರಣೆ-2026ರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ವಿಶ್ವ ಹಿರಿಯ ನಾಗರಿಕರ ದಿನಾಚರಣೆಯು ಮೊಟ್ಟಮೊದಲ ಬಾರಿಗೆ 1990ನೇ ಸಾಲಿನಲ್ಲಿ ಆಚರಿಸಿ ಶುರು ಮಾಡಲಾಗಿದೆ. ಯುನೈಟೆಡ್ ನೇಷನ್ಸ್ ಇದನ್ನು 1990ರಲ್ಲಿ ಅಂತರರಾಷ್ಟ್ರೀಯ ಮಟ್ಟದಲ್ಲಿ ಹಿರಿಯ ನಾಗರಿಕರ ದಿನಾಚರಣೆಯನ್ನು ಆಚರಿಸುವುದಕ್ಕೆ ಪ್ರತಿವರ್ಷ ಅಕ್ಟೋಬರ್ 1ರಂದು ಹಮ್ಮಿಕೊಳ್ಳಲು ನಿರ್ಧರಿಸಲಾಯಿತು.

ಹಿರಿಯ ನಾಗರಿಕರು 60 ವರ್ಷ ಆದ ನಂತರದಲ್ಲಿ ಅವರ ಆರೋಗ್ಯದ ದೃಷ್ಟಿಯಿಂದ ಹಾಗೂ ಸಮಾಜದಲ್ಲಿ ಅವರಿಗೆ ಯಾವ ರೀತಿ ಗೌರವ ಸಿಗುತ್ತಿದೆ ಎಂಬುದನ್ನು ಅರಿಯಲು ಈ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗುತ್ತದೆ. ಅವರಿಗೆ ಯಾವುದಾದರೂ 2ನೇ ಪುಟಕ್ಕೆ

## ವೈಟಿಪಿಎಸ್ ಭೂಸಂತ್ರಸ್ತರಿಗೆ ಉದ್ಯೋಗ: ಷರತ್ತು ಸಡಿಲಿಕೆಗೆ ಆಗ್ರಹ



ರಾಯಚೂರು, ಅ.1: ವೈಟಿಪಿಎಸ್ ಘಟಕಕ್ಕಾಗಿ ಜಮೀನು ಕಳೆದುಕೊಂಡ ಕುಟುಂಬಗಳ ಸದಸ್ಯರಿಗೆ ಉದ್ಯೋಗ ಅಥವಾ ತರಬೇತಿ ಕಲ್ಪಿಸುವ ಪ್ರಕ್ರಿಯೆಯಲ್ಲಿ ನಿಗದಿಪಡಿಸಿರುವ ಭೂಒಡೆತನದ ಅವಧಿಗೆ ಸಂಬಂಧಿಸಿದ ಷರತ್ತನ್ನು ಸಡಿಲಿಸಿ, ಅರ್ಹ ಭೂಸಂತ್ರಸ್ತರಿಗೆ ಉದ್ಯೋಗಾವಕಾಶ ಕಲ್ಪಿಸಬೇಕು ಎಂದು ರಾಯಚೂರು ಕೈಗಾರಿಕಾ ಪ್ರದೇಶ ಭೂಸಂತ್ರಸ್ತರ ಕ್ಷೇಮಾಭಿವೃದ್ಧಿ ಸಂಘ ಏಗನೂರು ಅಧ್ಯಕ್ಷ ಕೆ. ಸತ್ಯನಾರಾಯಣರಾವ್ ಒತ್ತಾಯಿಸಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸುಮಾರು 15 ವರ್ಷಗಳ ಹಿಂದೆ ವೈಟಿಪಿಎಸ್ ಘಟಕ ನಿರ್ಮಾಣಕ್ಕಾಗಿ ರಾಯಚೂರು ತಾಲೂಕಿನ ಏಗನೂರು, ಚಿಕ್ಕಸೂಗೂರು, ಕುಕನೂರು, ಹೆಗ್ಗಸನಹಳ್ಳಿ ಹಾಗೂ ದೇವಸೂಗೂರು ಗ್ರಾಮಗಳಿಗೆ ಸೇರಿದ ಸುಮಾರು 1,150 ಎಕರೆ ಫಲವತ್ತಾದ ಕೃಷಿ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿತ್ತು. ಆಗ ಜಮೀನು ನೀಡಿದ ಪ್ರತಿ ಕುಟುಂಬದ ಒಬ್ಬ ಸದಸ್ಯರಿಗೆ ವಿದ್ಯಾರ್ಹತೆಗೆ ಅನುಗುಣವಾಗಿ ನೇರ ನೇಮಕಾತಿ ಅಥವಾ ತರಬೇತಿ ಮೂಲಕ ಉದ್ಯೋಗ ಕಲ್ಪಿಸುವ ಭರವಸೆ ನೀಡಲಾಗಿತ್ತು ಎಂದು ಹೇಳಿದರು.

ಇದಕ್ಕೂ ಮುನ್ನ 1993-94ರಲ್ಲಿ ಇದೇ ಭಾಗದ ಬೆಲೆಬಾಳುವ ಕೃಷಿ ಜಮೀನನ್ನು ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ ಪ್ರತಿ ಎಕರೆಗೆ ₹50 ಸಾವಿರದಂತೆ ಸ್ವಾಧೀನಪಡಿಸಿಕೊಂಡಿತ್ತು. ನಂತರ 2012ರಲ್ಲಿ ವೈಟಿಪಿಎಸ್ ಯೋಜನೆಗಾಗಿ ಮತ್ತೊಮ್ಮೆ ಭೂಸ್ವಾಧೀನ ಪ್ರಕ್ರಿಯೆ ನಡೆಸಲಾಗಿದೆ ಎಂದು ವಿವರಿಸಿದರು.

ವೈಟಿಪಿಎಸ್‌ನಲ್ಲಿ ಸುಮಾರು ಒಂದು ದಶಕದಿಂದ ವಿದ್ಯುತ್ ಉತ್ಪಾದನೆ ನಡೆಯುತ್ತಿದ್ದರೂ, ಯೋಜನೆಗಾಗಿ ಜೀವನಾಧಾರವಾಗಿದ್ದ ಜಮೀನು ಬಿಟ್ಟುಕೊಟ್ಟ ಹಲವು ರೈತ ಕುಟುಂಬಗಳಿಗೆ ಇನ್ನೂ ಉದ್ಯೋಗದ ಭರವಸೆ ಈಡೇರಿಲ್ಲ. 2016ರಲ್ಲಿ ಭೂಸಂತ್ರಸ್ತ ಕುಟುಂಬಗಳ ಸದಸ್ಯರಿಂದ ಉದ್ಯೋಗಕ್ಕಾಗಿ ಅರ್ಜಿ ಆಹ್ವಾನಿಸಲಾಗಿದ್ದು, ಅಗತ್ಯ ವಿದ್ಯಾರ್ಹತಾ ದಾಖಲೆಗಳೊಂದಿಗೆ ಅರ್ಜಿಗಳನ್ನು ಸಲ್ಲಿಸಲಾಗಿತ್ತು. ಆದರೆ ಪರಿಶೀಲನೆ ವೇಳೆ ಮೂರು ವರ್ಷಗಳ ಭೂಒಡೆತನದ ಅವಧಿ ಪೂರೈಸಿಲ್ಲ ಎಂಬ ಕಾರಣ ಮುಂದಿಟ್ಟು 33 2ನೇ ಪುಟಕ್ಕೆ

## ಮಳೆ-ಬೆಳೆ ಸಮೃದ್ಧಿಗಾಗಿ ಸರ್ವಧರ್ಮ ಗುರುಗಳಿಂದ ಸಾಮೂಹಿಕ ಪ್ರಾರ್ಥನೆ

ಮಾನ್ವಿ: ಮಳೆ ಕೊರತೆಯಿಂದ ಎದುರಾಗಿರುವ ಸಂಕಷ್ಟ ನಿವಾರಣೆಯಾಗಿ ನಾಡಿನಲ್ಲಿ ಉತ್ತಮ ಮಳೆಯಾಗಿ ಬೆಳೆ ಸಮೃದ್ಧಿಯಾಗಲಿ ಎಂಬ ಆಶಯದೊಂದಿಗೆ ಪಟ್ಟಣದಲ್ಲಿ ಸರ್ವಧರ್ಮಗಳ ಧರ್ಮಗುರುಗಳ ನೇತೃತ್ವದಲ್ಲಿ ಸಾಮೂಹಿಕ ವಿಶೇಷ ಪ್ರಾರ್ಥನೆ ನಡೆಯಿತು.



ಪಟ್ಟಣದ ಸರ್ವಧರ್ಮ ಸೇವಾ ವೆಲ್ಫೇರ್ ಟ್ರಸ್ಟ್ ಆವರಣದಲ್ಲಿ ಸರ್ವಧರ್ಮ ಸೇವಾ ವೆಲ್ಫೇರ್ ಟ್ರಸ್ಟ್, ಭಾರತೀಯ ಸೇವಾ ಸಮಿತಿ ಹಾಗೂ ಕನಸು ಫೌಂಡೇಶನ್ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಕಾರ್ಯಕ್ರಮವನ್ನು ಕಲ್ಮಠದ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಉದ್ಘಾಟಿಸಿ ಆಶೀರ್ವಚನ ನೀಡಿದರು.

ಹವಾಮಾನ ವೈಪರೀತ್ಯದಿಂದ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದೆ ಬರದಂತಹ ಪರಿಸ್ಥಿತಿ ಎದುರಾಗಿದ್ದು, ಜನರು ಸಂಕಷ್ಟ ಅನುಭವಿಸುತ್ತಿದ್ದಾರೆ. ಮಳೆಗಾಗಿ ಭಗವಂತನಲ್ಲಿ ಭಕ್ತಿಯಿಂದ ಪ್ರಾರ್ಥನೆ ಸಲ್ಲಿಸಲಾಗಿದ್ದು, ದೇವರ ಕೃಪೆಯಿಂದ ಉತ್ತಮ ಮಳೆಯಾಗಿ ಜನರ ಸಂಕಷ್ಟಗಳು ದೂರವಾಗಲಿ ಎಂದು ಶ್ರೀಗಳು ಆಶಿಸಿದರು.

ಶಾಸಕ ಹಂಪಯ್ಯ ನಾಯಕ ಮಾತನಾಡಿ, ಈ ಬಾರಿ ಮಳೆಗಾಲದಲ್ಲಿಯೂ ಬೇಸಿಗೆಯಂತಹ ಬಿಸಿಲಿನ ವಾತಾವರಣ ಕಂಡುಬಂದಿದೆ. ಹಿಂದಿನ ಕಾಲದಲ್ಲಿ ಇಂತಹ ಪರಿಸ್ಥಿತಿ ಎದುರಾದಾಗ ಹಿರಿಯರು ದೇವರ ಮೊರೆ ಹೋಗಿ ವಿಶೇಷ ಪ್ರಾರ್ಥನೆ ಸಲ್ಲಿಸುವ ಸಂಪ್ರದಾಯವಿತ್ತು. ಪ್ರಾರ್ಥನೆಯ ಬಳಿಕ ಉತ್ತಮ ಮಳೆಯಾದ ಅನೇಕ ಸಂದರ್ಭಗಳನ್ನೂ ಹಿರಿಯರು ಸ್ಮರಿಸುತ್ತಿದ್ದರು ಎಂದರು.

ಸರ್ವಧರ್ಮ ಸೇವಾ ವೆಲ್ಫೇರ್ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷ ಡಾ. ಹನುಮಂತ ಕೋಟೆ ಅವರು ಹಲವು ವರ್ಷಗಳಿಂದ ಜನಪರ ಹಾಗೂ ಸಾಮಾಜಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದು, ಈ ಬಾರಿ ಮಳೆಗಾಗಿ ವಿವಿಧ ಧರ್ಮಗಳ ಗುರುಗಳನ್ನು ಒಂದೇ ವೇದಿಕೆಗೆ ಕರೆತಂದು ಸಾಮೂಹಿಕ ಪ್ರಾರ್ಥನೆ ಆಯೋಜಿಸಿರುವುದು 2ನೇ ಪುಟಕ್ಕೆ

## ನ್ಯಾಯಾಲಯದ ಆದೇಶ ಪಾಲಿಸದಿದ್ದರೆ ಕಾನೂನು ಪ್ರಕ್ರಿಯೆ: ಅಬ್ದುಲ್ ರಸುಲ್ ಸಾಬ್



ರಾಯಚೂರು, ಅ.1: ರಜಾ-ಈ-ಮುಸ್ತಫಾ ಎಜುಕೇಶನ್ ಟ್ರಸ್ಟ್‌ಗೆ ಸಂಬಂಧಿಸಿದ ವಿವಾದಿತ ಆಸ್ತಿಯ ಸ್ವಾಧೀನವನ್ನು ನ್ಯಾಯಾಲಯದ ಆದೇಶದಂತೆ ಹಸ್ತಾಂತರಿಸದಿದ್ದಲ್ಲಿ, ಕಾನೂನಿನ ಚೌಕಟ್ಟಿನಲ್ಲಿ ಆಸ್ತಿಯನ್ನು ಮರಳಿ ಪಡೆಯಲು ಅಗತ್ಯ ಕ್ರಮ ಅನುಸರಿಸಲಾಗುವುದು ಎಂದು ಟ್ರಸ್ಟ್ ಅಧ್ಯಕ್ಷ ಅಬ್ದುಲ್ ರಸುಲ್ ಸಾಬ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಟ್ರಸ್ಟ್‌ನ ಆಸ್ತಿ ಹಾಗೂ ಅದರ ಹೆಸರಿನ ಬಳಕೆಗೆ ಸಂಬಂಧಿಸಿದ ವಿವಾದ ಹಲವು ವರ್ಷಗಳಿಂದ ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿತ್ತು. ಮೂಲ ದಾವೆ ಸಂಖ್ಯೆ 68/2010ರಲ್ಲಿ ಕೆಳ ನ್ಯಾಯಾಲಯ ನೀಡಿದ್ದ ತೀರ್ಪಿನ ವಿರುದ್ಧ ಪ್ರಧಾನ ಜಿಲ್ಲಾ ನ್ಯಾಯಾಲಯದಲ್ಲಿ ಆರ್‌ಎ ಸಂಖ್ಯೆ 47/2022ರಡಿ ಮೇಲ್ಮನವಿ ಸಲ್ಲಿಸಲಾಗಿತ್ತು ಎಂದು ವಿವರಿಸಿದರು.

ಪ್ರಕರಣಕ್ಕೆ ಸಂಬಂಧಿಸಿದ ಟ್ರಸ್ಟ್ ಡೀಡ್, ದಾನಪತ್ರ ಸೇರಿದಂತೆ ವಿವಿಧ ದಾಖಲೆಗಳನ್ನು ಪರಿಶೀಲಿಸಿದ ಪ್ರಧಾನ ಜಿಲ್ಲಾ ನ್ಯಾಯಾಲಯವು, ಅಬ್ದುಲ್ ರಸುಲ್ ಸಾಬ್ ಮತ್ತು ಅವರ ಟ್ರಸ್ಟಿಗಳು ಸಂಬಂಧಿತ ಆಸ್ತಿಯ ಕಾನೂನುಬದ್ಧ ಮಾಲೀಕರು ಹಾಗೂ ಅನುಭೋಗದಾರರು ಎಂದು ತೀರ್ಪು ನೀಡಿದೆ ಎಂದು ಅವರು ತಿಳಿಸಿದರು.

ಅಲ್ಲದೆ, ಟ್ರಸ್ಟ್ ಹೆಸರಿನಲ್ಲಿ ನೋಂದಣಿಯಾಗಿರುವ ಟ್ರೇಡ್‌ಮಾರ್ಕ್ ಲೋಗೋ ಕೂಡ ತಮ್ಮ ಟ್ರಸ್ಟ್‌ಗೆ ಸೇರಿದ್ದು ಎಂದು ತೀರ್ಪಿನಲ್ಲಿ ಉಲ್ಲೇಖಿಸಲಾಗಿದೆ. ಎದುರುದಾರರು ಹಾಗೂ ಅವರ ಬೆಂಬಲಿಗರ ವಶದಲ್ಲಿರುವ ಆಸ್ತಿಯ ಸ್ವಾಧೀನ ಮತ್ತು ಅನುಭೋಗವನ್ನು ಟ್ರಸ್ಟ್‌ಗೆ ಹಸ್ತಾಂತರಿಸುವಂತೆ ನ್ಯಾಯಾಲಯ ಸೂಚಿಸಿದೆ ಎಂದು ಹೇಳಿದರು.

ರಜಾ-ಈ-ಮುಸ್ತಫಾ ಎಜುಕೇಶನ್ ಟ್ರಸ್ಟ್‌ನ್ನು 1994-95ರಲ್ಲಿ ತಮ್ಮನ್ನೂ ಒಳಗೊಂಡಂತೆ ಪ್ರಮುಖರು ನೋಂದಾಯಿಸಿದ್ದು, ಬಳಿಕ ಟ್ರಸ್ಟ್‌ನ ಲೋಗೋವನ್ನೂ ನೋಂದಣಿ ಮಾಡಿಸಲಾಗಿದೆ. ಟ್ರಸ್ಟ್‌ಗೆ ಸಂಬಂಧಿಸಿದ ಸರ್ವೆ ನಂ.126/2-/1ರ ಲಿಂಗಸುಗೂರು-ರಾಯಚೂರು ರಸ್ತೆಯ ಬಲಭಾಗದಲ್ಲಿರುವ ಜಮೀನನ್ನು ಖರೀದಿಸಲಾಗಿತ್ತು. 2008-09ರಲ್ಲಿ ತಮ್ಮ ಹೆಸರಿನಲ್ಲಿ ದಾನಪತ್ರ ಮಾಡಿಸಿಕೊಳ್ಳಲಾಗಿದ್ದು, ಆ ಸ್ಥಳದಲ್ಲಿ ಶಾಲೆ, ಕಾಲೇಜು, ಮದರಸ ಹಾಗೂ ಮಸೀದಿ ಸೇರಿದಂತೆ ವಿವಿಧ ಸಂಸ್ಥೆಗಳನ್ನು ನಡೆಸಿಕೊಂಡು ಬರಲಾಗಿದೆ ಎಂದು ವಿವರಿಸಿದರು. 2ನೇ ಪುಟಕ್ಕೆ

## ಅ.3, 4ರಂದು ರಾಯಚೂರಿನಲ್ಲಿ ಗೋವಿಂದ ಗಾನ ಸಂಸ್ಮರಣೋತ್ಸವ



ರಾಯಚೂರು, ಅ.1: ದಾಸ ಸಾಹಿತ್ಯದ ಮೂಲಕ ಆಧ್ಯಾತ್ಮಿಕ ಚಿಂತನೆ ಮತ್ತು ಭಕ್ತಿಯ ಸಂದೇಶವನ್ನು ಜನರಿಗೆ ಪಸರಿಸಿದ ಶ್ರೀ ಅಸ್ಕಿಹಾಳ ಗೋವಿಂದ ದಾಸರ ಸ್ಮರಣಾರ್ಥ ಅ.3 ಮತ್ತು 4ರಂದು ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಎರಡು ದಿನಗಳ ಗೋವಿಂದ ಗಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹರಿದಾಸ ಸೇವಾ ಇಂಟರ್‌ನ್ಯಾಷನಲ್ ಬೆಂಗಳೂರು ಅಧ್ಯಕ್ಷ ಹಾಗೂ ಗಾಯಕ ಶೇಷಗಿರಿದಾಸ ರಾಯಚೂರು ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎರಡೂ ದಿನ ಸಂಜೆ 4.30ರಿಂದ ಭಜನೆ, ದಾಸವಾಣಿ, ಉಪನ್ಯಾಸ, ಆಶೀರ್ವಚನ, ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ಸಾಧಕರಿಗೆ ಗೌರವ ಸಮರ್ಪಣೆ ನಡೆಯಲಿದೆ ಎಂದು ಮಾಹಿತಿ ನೀಡಿದರು.

ಅ.3ರಂದು ಸಂಜೆ 4.30ಕ್ಕೆ ವಿಧಾನ ಪರಿಷತ್ ಸದಸ್ಯ ಹಾಗೂ ಮಾಜಿ ಸಚಿವ ಎನ್. ಎಸ್. ಬೋಸರಾಜ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ. ರಾಯಚೂರು ಲೋಕಸಭಾ ಕ್ಷೇತ್ರದ ಸಂಸದ ಜಿ. ಕುಮಾರ ನಾಯಕ್, ಶಾಸಕ ಡಾ. ಶಿವರಾಜ ಪಾಟೀಲ ಸೇರಿದಂತೆ ಹಲವು ಗಣ್ಯರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ ಎಂದರು.

ಅ.4ರಂದು ಮಂತ್ರಾಲಯದ 108 ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರು ಸಾನ್ನಿಧ್ಯ ವಹಿಸಲಿದ್ದಾರೆ. ಇದೇ ದಿನ 500 ಮಹಿಳೆಯರಿಂದ ಸಮೂಹ ಗಾಯನ ನಡೆಯಲಿದ್ದು, ಕಲಾಕುಂಚ, ಭರತನಾಟ್ಯ, ಕೋಲಾಟ ಸೇರಿದಂತೆ ವಿವಿಧ ಸಾಂಸ್ಕೃತಿಕ ಪ್ರದರ್ಶನಗಳು ಕಾರ್ಯಕ್ರಮಕ್ಕೆ ಮೆರುಗು ನೀಡಲಿವೆ ಎಂದು ಹೇಳಿದರು.

ದಾಸ ಸಾಹಿತ್ಯದ ಅಧ್ಯಯನ ಮತ್ತು ಸಂಶೋಧನೆಯಲ್ಲಿ ವಿಶೇಷ ಕೊಡುಗೆ ನೀಡಿರುವ ಕಲಬುರಗಿಯ ಖ್ಯಾತ ಸಂಶೋಧಕ ಹಾಗೂ ಚಿಂತಕ ಡಾ. ಸ್ವಾಮಿರಾವ್ ಕುಲಕರ್ಣಿ ಅವರಿಗೆ ಈ ವರ್ಷದ ಶ್ರೀ ಗೋವಿಂದ ವಿಠಲ ಪ್ರಶಸ್ತಿ ನೀಡಿ ಗೌರವಿಸಲಾಗುವುದು.

ಇದೇ ಸಂದರ್ಭದಲ್ಲಿ ಅನಂತರಾವ ಸರಾಫ, ನಾರಾಯಣಪೇಟದ ಶಕ್ತಿ ಪೀಠಂ ಶಾಂತ ಮಠದ ಸ್ವಾಮಿ ಶಾಂತನಂದ ಪುರೋಹಿತ, ವೈದ್ಯ ಡಾ. ಅನಿರುದ್ಧ ಕುಲಕರ್ಣಿ ಹಾಗೂ ಕಾಂತಾಚಾರ್ಯ ಅರಿಶಿಣಗಿ ಅವರನ್ನು ಅವರ ಸೇವೆ ಮತ್ತು ಸಾಧನೆ ಗುರುತಿಸಿ ವಿಶೇಷವಾಗಿ ಸನ್ಮಾನಿಸಲಾಗುವುದು ಎಂದು ತಿಳಿಸಿದರು.

ಹರಿದಾಸ ಪರಂಪರೆ ಹಾಗೂ ದಾಸ ಸಾಹಿತ್ಯದ ಮಹತ್ವವನ್ನು ಇಂದಿನ ಪೀಳಿಗೆಗೆ ಪರಿಚಯಿಸುವ ಆಶಯದೊಂದಿಗೆ ಕಾರ್ಯಕ್ರಮ ರೂಪಿಸಲಾಗಿದ್ದು, ಭಕ್ತರು, ದಾಸ ಸಾಹಿತ್ಯಾಸಕ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಶೇಷಗಿರಿದಾಸ ಕೋರಿದರು.

ಸುದ್ದಿಗೋಷ್ಠಿಯಲ್ಲಿ ಮುರುಳಿಧರ್ ಕುಲಕರ್ಣಿ ಉಪಸ್ಥಿತರಿದ್ದರು.

# ಸತ್ಯಅಹಿಂಸೆಯ ಹಾದಿಯಲ್ಲಿ ದೇಶವನ್ನು ಮುನ್ನಡೆಸಿದ ಮಹಾತ್ಮ ಗಾಂಧಿ

ಭಾರತದ ಸ್ವಾತಂತ್ರ್ಯ ಹೋರಾಟದ ಇತಿಹಾಸದಲ್ಲಿ ಮೋಹನದಾಸ್ ಕರಮಚಂದ ಗಾಂಧಿ ಅವರ ಬದುಕು ವಿಶಿಷ್ಟ ಅಧ್ಯಾಯ. ಶಸ್ತ್ರಾಸ್ತ್ರಗಳಿಗಿಂತ ಸತ್ಯ, ಅಹಿಂಸೆ ಮತ್ತು ಜನಸಾಮಾನ್ಯರ ಸಂಘಟಿತ ಶಕ್ತಿಯ ಮೂಲಕ ಅನ್ಯಾಯವನ್ನು ಎದುರಿಸಬಹುದು ಎಂಬ ತತ್ವವನ್ನು ಅವರು ತಮ್ಮ ರಾಜಕೀಯ ಹಾಗೂ ಸಾಮಾಜಿಕ ಹೋರಾಟಗಳಲ್ಲಿ ಪ್ರಯೋಗಿಸಿದರು. ಸಾಮಾನ್ಯ ಕುಟುಂಬದಲ್ಲಿ ಜನಿಸಿದ ಮೋಹನದಾಸ್ ಮುಂದೆ ಮಹಾತ್ಮ ಗಾಂಧಿ ಎಂದು ವಿಶ್ವದಾದ್ಯಂತ ಗುರುತಿಸಿಕೊಂಡರು.

ಮೋಹನದಾಸ್ ಕರಮಚಂದ ಗಾಂಧಿ ಅವರು 1869ರ ಅಕ್ಟೋಬರ್ 2ರಂದು ಗುಜರಾತಿನ ಪೋರಬಂದರ್‌ನಲ್ಲಿ ಜನಿಸಿದರು. ತಂದೆ ಕರಮಚಂದ ಗಾಂಧಿ ಪೋರಬಂದರ್ ಸೇರಿದಂತೆ ಹಲವು ಸಂಸ್ಥಾನಗಳಲ್ಲಿ ದಿವಾನರಾಗಿ ಸೇವೆ ಸಲ್ಲಿಸಿದ್ದರು. ತಾಯಿ ಪುತಳೀಬಾಯಿ ಧಾರ್ಮಿಕ ಮನೋಭಾವ ಹೊಂದಿದ್ದು, ಅವರ ಸರಳತೆ, ಉಪವಾಸ, ಶಿಸ್ತು ಮತ್ತು ನಂಬಿಕೆಗಳು ಬಾಲಕ ಮೋಹನದಾಸ್ ಮೇಲೆ ಆಳವಾದ ಪ್ರಭಾವ ಬೀರಿದವು. ಬಾಲ್ಯದಲ್ಲಿ ಗಾಂಧಿ ಅತಿಯಾದ ಸಂಕೋಚ ಸ್ವಭಾವದವರಾಗಿದ್ದು, ತಮ್ಮನ್ನು ಅಸಾಧಾರಣ ವಿದ್ಯಾರ್ಥಿ ಎಂದು ಅವರು ಎಂದಿಗೂ ಚಿತ್ರಿಸಿಕೊಂಡಿರಲಿಲ್ಲ.



1883ರಲ್ಲಿ ಕಸ್ತೂರಬಾ ಅವರೊಂದಿಗೆ ವಿವಾಹವಾದ ಗಾಂಧಿ, ಮೆಟ್ರಿಕ್ಯುಲೇಷನ್ ಮುಗಿಸಿದ ನಂತರ ಕೆಲಕಾಲ ಭಾವನಗರದ ಸಾಮಳದಾಸ್ ಕಾಲೇಜಿನಲ್ಲಿ ಓದಿದರು. ಬಳಿಕ ಕಾನೂನು ಶಿಕ್ಷಣಕ್ಕಾಗಿ 1888ರಲ್ಲಿ ಇಂಗ್ಲೆಂಡ್‌ಗೆ ತೆರಳಿದರು. ಲಂಡನ್‌ನಲ್ಲಿದ್ದಾಗ ಆಹಾರ ಪದ್ಧತಿ, ಸರಳ ಜೀವನ ಹಾಗೂ ವಿವಿಧ ಧಾರ್ಮಿಕ ಮತ್ತು ತಾತ್ವಿಕ ಕೃತಿಗಳ ಅಧ್ಯಯನ ಅವರ ಚಿಂತನೆಯ ಮೇಲೆ ಪ್ರಭಾವ ಬೀರಿತು. 1891ರಲ್ಲಿ ಬ್ಯಾರಿಸ್ಟರ್ ಆಗಿ ಭಾರತಕ್ಕೆ ಮರಳಿದ ಅವರು ವಕೀಲ ವೃತ್ತಿಯಲ್ಲಿ ನಿರೀಕ್ಷಿತ ಯಶಸ್ಸು ಕಾಣಲಿಲ್ಲ.

1893ರಲ್ಲಿ ಕಾನೂನು ಕೆಲಸದ ನಿಮಿತ್ತ ದಕ್ಷಿಣ ಆಫ್ರಿಕಾಕ್ಕೆ ತೆರಳಿದ ಘಟನೆ ಗಾಂಧಿ ಜೀವನಕ್ಕೆ ಮಹತ್ವದ ತಿರುವು ನೀಡಿತು. ಅಲ್ಲಿನ ಪೀಟರ್‌ಮಾರಿಟ್ಸ್‌ಬರ್ಗ್‌ನಲ್ಲಿ ಪ್ರಥಮ ದರ್ಜೆಯ ರೈಲು ಟಿಕೆಟ್ ಹೊಂದಿದ್ದರೂ ವರ್ಣಭೇದದ ಕಾರಣ ಅವರನ್ನು ರೈಲಿನಿಂದ ಕೆಳಗಿಳಿಸಲಾಯಿತು. ದಕ್ಷಿಣ ಆಫ್ರಿಕಾದಲ್ಲಿ ಭಾರತೀಯರು ಎದುರಿಸುತ್ತಿದ್ದ ತಾರತಮ್ಯವನ್ನು ಕಂಡ ಗಾಂಧಿ, ಅವರ ಹಕ್ಕುಗಳಿಗಾಗಿ ಸಂಘಟಿತ ಹೋರಾಟ ಆರಂಭಿಸಿದರು. ಇದೇ ಅವಧಿಯಲ್ಲಿ ಸತ್ಯ, ಅಹಿಂಸೆ ಮತ್ತು ಅನ್ಯಾಯದ ವಿರುದ್ಧ ಶಾಂತಿಯುತ ಪ್ರತಿರೋಧವನ್ನು ಆಧರಿಸಿದ ಸತ್ಯಾಗ್ರಹ ಅವರ ಹೋರಾಟದ ಪ್ರಮುಖ ಮಾರ್ಗವಾಗಿ ರೂಪುಗೊಂಡಿತು.

ಸುಮಾರು ಎರಡು ದಶಕಗಳ ದಕ್ಷಿಣ ಆಫ್ರಿಕಾ ಜೀವನದ ನಂತರ ಗಾಂಧಿ 1915ರಲ್ಲಿ ಭಾರತಕ್ಕೆ ಮರಳಿದರು. ದೇಶದ ಜನರ ಬದುಕು, ರೈತರ ಸಮಸ್ಯೆಗಳು ಮತ್ತು ಬ್ರಿಟಿಷ್ ಆಡಳಿತದ ಪರಿಣಾಮಗಳನ್ನು ಹತ್ತಿರದಿಂದ ಅರಿಯಲು ವಿವಿಧ ಪ್ರದೇಶಗಳಿಗೆ ಭೇಟಿ ನೀಡಿದರು. 1917ರ ಚಂಪಾರಣ ಸತ್ಯಾಗ್ರಹ ಅವರ ಭಾರತದ ಸಾರ್ವಜನಿಕ ಹೋರಾಟಗಳಲ್ಲಿ ಪ್ರಮುಖ ಘಟ್ಟವಾಯಿತು. ನೀಲಿ ಬೆಳೆಗಾರ ರೈತರು ಎದುರಿಸುತ್ತಿದ್ದ ಸಮಸ್ಯೆಗಳನ್ನು ತಿಳಿದುಕೊಳ್ಳಲು ಚಂಪಾರಣಕ್ಕೆ ತೆರಳಿದ ಗಾಂಧಿಗೆ ಅಲ್ಲಿಂದ ಹೊರಹೋಗುವಂತೆ ಆಡಳಿತ ಸೂಚಿಸಿತು. ಆದರೆ ಅವರು ಆದೇಶ ಪಾಲಿಸದೆ ನ್ಯಾಯಾಲಯವನ್ನು ಎದುರಿಸಿದರು. ನಂತರ ಪ್ರಕರಣವನ್ನು ಸರ್ಕಾರ ಹಿಂಪಡೆದು, ರೈತರ ಸಮಸ್ಯೆಗಳ ಪರಿಶೀಲನೆಗೆ ಅವಕಾಶ ನೀಡಿತು.

ಮುಂದಿನ ವರ್ಷಗಳಲ್ಲಿ ಗಾಂಧಿ ಭಾರತೀಯ ರಾಷ್ಟ್ರೀಯ ಚಳವಳಿಯ ಪ್ರಮುಖ ನಾಯಕರಾದರು. ಅಸಹಕಾರ, ಸ್ವದೇಶಿ, ಖಾದಿ, ಗ್ರಾಮೀಣ ಸ್ವಾವಲಂಬನೆ ಹಾಗೂ ಅಸ್ಪೃಶ್ಯತೆ ನಿವಾರಣೆ ಮೊದಲಾದ ವಿಷಯಗಳಿಗೆ ಒತ್ತು ನೀಡಿದರು. ಅವರ ದೃಷ್ಟಿಯಲ್ಲಿ ಸ್ವಾತಂತ್ರ್ಯ ಎಂದರೆ ಕೇವಲ ಬ್ರಿಟಿಷರು ಭಾರತ ಬಿಟ್ಟು ಹೋಗುವುದಲ್ಲ; ಸಾಮಾನ್ಯ ಜನರ ಜೀವನದಲ್ಲಿ ಸ್ವಾಭಿಮಾನ, ಸ್ವಾವಲಂಬನೆ ಮತ್ತು ಸಾಮಾಜಿಕ ಬದಲಾವಣೆಯೂ ಅಗತ್ಯವಾಗಿತ್ತು.

1930ರಲ್ಲಿ ನಡೆದ ಉಪ್ಪಿನ ಸತ್ಯಾಗ್ರಹ ಗಾಂಧಿ ನೇತೃತ್ವದ ಅತ್ಯಂತ ಪ್ರಸಿದ್ಧ ಹೋರಾಟಗಳಲ್ಲಿ ಒಂದಾಯಿತು. ಬ್ರಿಟಿಷರ ಉಪ್ಪಿನ ಕಾನೂನನ್ನು ವಿರೋಧಿಸಿ ಸಬರಮತಿ ಆಶ್ರಮದಿಂದ ದಾಂಡಿವರೆಗೆ ಅವರು ಸಹಚರರೊಂದಿಗೆ ಪಾದಯಾತ್ರೆ ನಡೆಸಿದರು. ಸುಮಾರು 385 ಕಿ.ಮೀ. ದೂರದ ಈ ಯಾತ್ರೆ 25 ದಿನಗಳ ಕಾಲ ನಡೆಯಿತು. ಸರಳವಾದ ಉಪ್ಪು ಎಂಬ ದಿನನಿತ್ಯದ ವಸ್ತುವನ್ನೇ ಬ್ರಿಟಿಷ್ ಆಡಳಿತದ ವಿರುದ್ಧದ ಜನಾಂದೋಲನದ ಸಂಕೇತವಾಗಿ ರೂಪಿಸಿದ ಈ ಹೋರಾಟ ದೇಶದ ವಿವಿಧ ಭಾಗಗಳಲ್ಲಿ ನಾಗರಿಕ ಅಸಹಕಾರಕ್ಕೆ ಪ್ರೇರಣೆ ನೀಡಿತು.

1942ರಲ್ಲಿ ಸ್ವಾತಂತ್ರ್ಯ ಹೋರಾಟ ಮತ್ತೊಂದು ನಿರ್ಣಾಯಕ ಹಂತ ತಲುಪಿತು. ಆಗಸ್ಟ್ 8ರಂದು ಭಾರತ ಬಿಟ್ಟು ತೊಲಗಿ ಚಳವಳಿಗೆ ಕರೆ ನೀಡಿದ ಗಾಂಧಿ, ಮಾಡು ಇಲ್ಲವೇ ಮಡಿ ಎಂಬ ಸಂದೇಶ ನೀಡಿದರು. ಮರುದಿನವೇ ಅವರನ್ನು ಬಂಧಿಸಿ ಪುಣೆಯ ಆಗಾಖಾನ್ ಅರಮನೆಯಲ್ಲಿ ಬಂಧನದಲ್ಲಿರಿಸಲಾಯಿತು. ಈ ಬಂಧನದ ಅವಧಿಯಲ್ಲಿ ಅವರ ಆಪ್ತ ಸಹಾಯಕ ಮಹಾದೇವ ದೇಸಾಯಿ ನಿಧನರಾದರು. 1944ರ ಫೆಬ್ರವರಿ 22ರಂದು ಕಸ್ತೂರಬಾ ಗಾಂಧಿಯವರೂ ಅಲ್ಲಿಯೇ ನಿಧನರಾದರು. 1944ರ ಮೇ 6ರಂದು ಗಾಂಧಿ ಬಿಡುಗಡೆಗೊಂಡರು.

1947ರ ಆಗಸ್ಟ್ 15ರಂದು ಭಾರತ ಸ್ವತಂತ್ರವಾಯಿತು. ಆದರೆ ಸ್ವಾತಂತ್ರ್ಯದೊಂದಿಗೆ ದೇಶ ವಿಭಜನೆಯ ನೋವು ಮತ್ತು ವ್ಯಾಪಕ ಕೋಮು ಹಿಂಸಾಚಾರವೂ ಎದುರಾಯಿತು. ಆ ಸಂದರ್ಭದಲ್ಲಿ ಗಾಂಧಿ ರಾಜಕೀಯ ಸಂಭ್ರಮಕ್ಕಿಂತ ಶಾಂತಿ ಮತ್ತು ಕೋಮು ಸೌಹಾರ್ದ ಸ್ಥಾಪನೆಗೆ ಹೆಚ್ಚಿನ ಗಮನ ಹರಿಸಿದರು. ಕಲ್ಕತ್ತಾ ಮತ್ತು ದೆಹಲಿಯಲ್ಲಿ ಹಿಂಸಾಚಾರ ನಿಲ್ಲಿಸುವಂತೆ ಮನವಿ ಮಾಡಿ ಉಪವಾಸಗಳನ್ನು ಕೈಗೊಂಡರು. ಸ್ವಾತಂತ್ರ್ಯದ ದಿನವಾದ 1947ರ ಆಗಸ್ಟ್ 15ರನ್ನೂ ಅವರು ಕಲ್ಕತ್ತಾದಲ್ಲಿ ಉಪವಾಸ ಮತ್ತು ಪ್ರಾರ್ಥನೆಯೊಂದಿಗೆ ಕಳೆದರು.

ಗಾಂಧಿಯವರ ಜೀವನದ ಕೊನೆಯ ದಿನಗಳೂ ಶಾಂತಿ ಮತ್ತು ಸೌಹಾರ್ದದ ಪ್ರಯತ್ನಗಳಲ್ಲಿಯೇ ಕಳೆದವು. 1948ರ ಜನವರಿ 30ರಂದು ನವದೆಹಲಿಯ ಬಿರ್ಲಾ ಹೌಸ್‌ನಲ್ಲಿ ಸಂಜೆ ಪ್ರಾರ್ಥನಾ ಸಭೆಗೆ ತೆರಳುತ್ತಿದ್ದಾಗ ನಾಥೂರಾಮ್ ವಿನಾಯಕ ಗೋಡ್ಸೆ ಗುಂಡು ಹಾರಿಸಿ ಅವರನ್ನು ಹತ್ಯೆ ಮಾಡಿದನು. ಮರುದಿನ ಯಮುನಾ ನದಿಯ ತೀರದ ರಾಜಘಾಟ್‌ನಲ್ಲಿ ಅವರ ಅಂತ್ಯಕ್ರಿಯೆ ನೆರವೇರಿಸಲಾಯಿತು.

ಗಾಂಧಿಯವರ ವಿಚಾರಗಳು ಮತ್ತು ರಾಜಕೀಯ ವಿಧಾನಗಳ ಕುರಿತು ಅವರ ಕಾಲದಲ್ಲಿಯೇ ಭಿನ್ನಾಭಿಪ್ರಾಯಗಳಿದ್ದವು ಮತ್ತು ಇಂದಿಗೂ ಅವರ ಕೆಲವು ನಿಲುವುಗಳು ಇತಿಹಾಸಕಾರರು ಹಾಗೂ ಚಿಂತಕರ ಚರ್ಚೆಗೆ ಒಳಪಡುತ್ತವೆ. ಆದರೂ ಸತ್ಯಾಗ್ರಹ, ಅಹಿಂಸಾತ್ಮಕ ಪ್ರತಿರೋಧ ಮತ್ತು ಜನಸಾಮಾನ್ಯರನ್ನು ರಾಜಕೀಯ ಹೋರಾಟದಲ್ಲಿ ದೊಡ್ಡ ಪ್ರಮಾಣದಲ್ಲಿ ತೊಡಗಿಸುವ ಅವರ ಪ್ರಯೋಗಗಳು ಭಾರತದ ಸ್ವಾತಂತ್ರ್ಯ ಚಳವಳಿಯ ಇತಿಹಾಸದಲ್ಲಿ ಮಹತ್ವದ ಸ್ಥಾನ ಪಡೆದಿವೆ. ಅವರ ಜೀವನವು ಸತ್ಯ ಮತ್ತು ಅಹಿಂಸೆಯನ್ನು ವೈಯಕ್ತಿಕ ಮೌಲ್ಯಗಳಷ್ಟೇ ಅಲ್ಲದೆ ಸಾರ್ವಜನಿಕ ಹೋರಾಟದ ವಿಧಾನಗಳಾಗಿಯೂ ಪರೀಕ್ಷಿಸಿದ ದೀರ್ಘ ಪ್ರಯೋಗವಾಗಿತ್ತು.

## ಮೊದಲನೇ ಪುಟದಿಂದ

## ವೈಟಿಪಿಎಸ್ ಭೂಸಂತ್ರಸ್ತರಿಗೆ ಉದ್ಯೋಗ: ಷರತ್ತು ಸಡಿಲಿಕೆಗೆ ಆಗ್ರಹ

ಕುಟುಂಬಗಳ ಸದಸ್ಯರಿಗೆ ಸೂಚನಾ ಪತ್ರ ನೀಡಲಾಗಿದೆ ಎಂದು ಆರೋಪಿಸಿದರು.

ಈ ನಿಯಮದಿಂದ ಉದ್ಯೋಗಾವಕಾಶ ವಂಚಿತರಾಗಿರುವ 33 ಕುಟುಂಬಗಳಿಗೆ ನ್ಯಾಯ ಒದಗಿಸುವಂತೆ ಮುಖ್ಯಮಂತ್ರಿ, ಕರ್ನಾಟಕ ವಿದ್ಯುತ್ ನಿಗಮದ ಆಡಳಿತ ಮಂಡಳಿ ಹಾಗೂ ಜಿಲ್ಲಾಡಳಿತಕ್ಕೆ ಹಲವು ಬಾರಿ ಮನವಿ ಮಾಡಲಾಗಿದೆ. ಆಡಳಿತ ಮಂಡಳಿಯ ಸಾಮಾನ್ಯ ಸಭೆಗಳಲ್ಲಿ ಭೂಒಡೆತನದ ಅವಧಿಗೆ ಸಂಬಂಧಿಸಿದ ನಿಯಮವನ್ನು ಸಡಿಲಿಸುವ ಭರವಸೆ ನೀಡಿದ್ದರೂ, ಹಲವು ವರ್ಷಗಳು ಕಳೆದರೂ ಸಮಸ್ಯೆಗೆ ಪರಿಹಾರ ದೊರೆತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಉದ್ಯೋಗ ಸಿಗುವ ನಿರೀಕ್ಷೆಯಲ್ಲಿ ದೀರ್ಘಕಾಲದಿಂದ ಕಾಯುತ್ತಿರುವ ಕುಟುಂಬಗಳು ಆರ್ಥಿಕ ಹಾಗೂ ಕೌಟುಂಬಿಕ ಸಂಕಷ್ಟ ಎದುರಿಸುತ್ತಿವೆ. ಕೆಲ ಕುಟುಂಬಗಳಲ್ಲಿ ಭಿನ್ನಾಭಿಪ್ರಾಯಗಳು ಉಂಟಾಗಿದ್ದು, ಸಮಸ್ಯೆ ಪರಿಹಾರಕ್ಕಾಗಿ ನ್ಯಾಯಾಲಯದ ಮೊರೆ ಹೋಗುವ ಸ್ಥಿತಿಯೂ ನಿರ್ಮಾಣವಾಗಿದೆ ಎಂದು ತಿಳಿಸಿದರು.

ಭೂಮಿ ಕಳೆದುಕೊಂಡ ಕುಟುಂಬಗಳ ಬೇಡಿಕೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ, ಭೂಒಡೆತನದ ಅವಧಿಗೆ ಸಂಬಂಧಿಸಿದ ಷರತ್ತನ್ನು ಸಡಿಲಿಸುವ ಮೂಲಕ ಅರ್ಹರಿಗೆ ಉದ್ಯೋಗ ಕಲ್ಪಿಸಬೇಕು. ಬೇಡಿಕೆಗೆ ಸ್ಪಂದಿಸದಿದ್ದರೆ ಭೂಸಂತ್ರಸ್ತ ಕುಟುಂಬಗಳೊಂದಿಗೆ ಬೀದಿಗಿಳಿದು ಧರಣಿ ನಡೆಸುವುದು ಅನಿವಾರ್ಯವಾಗಲಿದೆ ಎಂದು ಎಚ್ಚರಿಸಿದರು.

ನಮ್ಮ ಹೋರಾಟ ಯಾರೊಂದಿಗೂ ಸಂಘರ್ಷ ನಡೆಸುವುದಕ್ಕಾಗಿ ಅಲ್ಲ. ಯೋಜನೆಗಾಗಿ ಕೃಷಿ ಭೂಮಿ ತ್ಯಾಗ ಮಾಡಿದ ಕುಟುಂಬಗಳಿಗೆ ಹಿಂದೆ ನೀಡಿದ್ದ ಉದ್ಯೋಗದ ಭರವಸೆ ಈಡೇರಿಸಿ ನ್ಯಾಯ ದೊರಕಿಸಿಕೊಡುವುದೇ ನಮ್ಮ ಉದ್ದೇಶ ಎಂದು ಕೆ. ಸತ್ಯನಾರಾಯಣರಾವ್ ಸ್ಪಷ್ಟಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಎಸ್.ಜಿ. ಪ್ರಭು, ಭೀಮಣ್ಣಗೌಡ, ಶರಣಪ್ಪಗೌಡ, ರಾಘವೇಂದ್ರ ಸಾಗರ, ತಿಮ್ಮಪ್ಪ ಹಾಗೂ ಬಸವ ಪ್ರಕಾಶ್ ರೆಡ್ಡಿ ಉಪಸ್ಥಿತರಿದ್ದರು.

## ನ್ಯಾಯಾಲಯದ ಆದೇಶ ಪಾಲಿಸದಿದ್ದರೆ ಕಾನೂನು ಪ್ರಕ್ರಿಯೆ: ಅಬ್ದುಲ್ ರಸುಲ್ ಸಾಬ್

ಟ್ರಸ್ಟ್‌ನ ಹೆಸರನ್ನು ಹೋಲುವ ಮತ್ತೊಂದು ಸಂಸ್ಥೆಯನ್ನು ರಚಿಸಿ, ಅದರ ಮೂಲಕ ತಮ್ಮ ಟ್ರಸ್ಟ್‌ಗೆ ಸೇರಿದ ಆಸ್ತಿಯನ್ನು ಅನಧಿಕೃತವಾಗಿ ವಶಪಡಿಸಿಕೊಳ್ಳಲಾಗಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ನ್ಯಾಯಾಲಯದ ಮೊರೆ ಹೋಗಲಾಗಿತ್ತು. ಹಿರಿಯ ನ್ಯಾಯವಾದಿ ಮರಿಬಸನಗೌಡ ಅವರು ಜೀವಿತಾವಧಿಯಲ್ಲಿ ತಮ್ಮ ಪರ ಪ್ರಕರಣ ನಡೆಸಿದ್ದರು. ಸುಮಾರು 12 ವರ್ಷಗಳ ಕಾಲ ಕಾನೂನು ಹೋರಾಟ ಮುಂದುವರಿದಿದ್ದು, ಕೆಳ ನ್ಯಾಯಾಲಯದ ತೀರ್ಪಿನ ನಂತರ ಪ್ರಧಾನ ಜಿಲ್ಲಾ ನ್ಯಾಯಾಲಯಕ್ಕೆ ಮೇಲ್ಮನವಿ ಸಲ್ಲಿಸಲಾಗಿತ್ತು ಎಂದು ಹೇಳಿದರು.

ನ್ಯಾಯಾಲಯದ ಆದೇಶಕ್ಕೆ ಅನುಗುಣವಾಗಿ ನಿಗದಿತ ಅವಧಿಯೊಳಗೆ ಆಸ್ತಿಯ ಸ್ವಾಧೀನ ಹಾಗೂ ಅನುಭೋಗವನ್ನು ಹಸ್ತಾಂತರಿಸಬೇಕು. ಆದೇಶ ಪಾಲನೆಯಾಗದಿದ್ದರೆ ನ್ಯಾಯಾಲಯದ ಮೂಲಕವೇ ಮುಂದಿನ ಕಾನೂನು ಪ್ರಕ್ರಿಯೆ ಕೈಗೊಂಡು ಆಸ್ತಿಯ ಸ್ವಾಧೀನ ಪಡೆಯಲಾಗುವುದು ಎಂದು ಅಬ್ದುಲ್ ರಸುಲ್ ಸಾಬ್ ತಿಳಿಸಿದರು.

ಟ್ರಸ್ಟ್ ಪರ ನ್ಯಾಯಾಲಯದಲ್ಲಿ ವಾದ ಮಂಡಿಸಿದ ವಕೀಲ ಬಸನಗೌಡ ಕೊಪ್ಪರ್ ಮಾತನಾಡಿ, ನ್ಯಾಯಾಲಯದ ತೀರ್ಪಿನ ಅನ್ವಯ ಸಂಬಂಧಿತ ಆಸ್ತಿಯ ಸ್ವಾಧೀನ ಪಡೆಯಲು ಟ್ರಸ್ಟ್‌ಗೆ ಕಾನೂನುಬದ್ಧ ಹಕ್ಕಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮೊಹಮ್ಮದ್ ಗೌಸ್ ಪಾಷಾ, ಅಬ್ದುಲ್ ಸಲೀಂ, ಮೊಹಮ್ಮದ್ ಶಾಹಿದ್, ಮಹಮ್ಮದ್ ರಜಾಕ್, ಮೌನೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಹಿರಿಯ ನಾಗರಿಕರನ್ನು ಗೌರವಿಸುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ: ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್

ಶೋಷಣೆ ಒಳಗಾದರೆ ಯಾವೆಲ್ಲ ಕಾಯ್ದೆ ಕಾನೂನುಗಳು ಇವೆ. ಅವುಗಳ ಕುರಿತು ಅರಿವು ಮೂಡಿಸಲಿಕ್ಕೆ ಈ ಕಾರ್ಯಕ್ರಮವನ್ನು ಅಂತರರಾಷ್ಟ್ರೀಯ ಮಟ್ಟದಲ್ಲಿ ಆಚರಿಸಲಾಗುತ್ತದೆ ಎಂದರು.

ಯಾವ ಇಲಾಖೆಯಲ್ಲಿ ಏನು ಪರಿಹಾರ ಸಿಗುತ್ತದೆ ಎಂದು ಹೇಳಿ ಅರಿವು ಮೂಡಿಸುವುದೇ ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ. ಹಿರಿಯ ನಾಗರಿಕರು ಅಂದರೆ, ಮನಸ್ಸಿಗೆ ವಯಸ್ಸಾಗಿಲ್ಲ, ದೇಹಕ್ಕೆ ಮಾತ್ರ ವಯಸ್ಸಾಗಿರುತ್ತದೆ. ಅವರಲ್ಲಿ ಬಹಳಷ್ಟು ಅನುಭವಗಳು ಇರುತ್ತವೆ ಎಂದರು.

ಹಿರಿಯ ನಾಗರಿಕರು ಸಾಕಷ್ಟು ಅನುಭವಗಳನ್ನು ಪಡೆದುಕೊಂಡಿರುತ್ತಾರೆ. ಹಾಗಾಗಿ ನಾವು ಯಾವ ರೀತಿ ಒಂದು ಮರ ಬಹಳ ಸಮೃದ್ಧವಾಗಿ ಅದು ಫಲ ಕೊಡುತ್ತದೆ ಅಂತ ಹೇಳಿದರೆ, ಅದರ ಬೇರು ಬಹಳ ಡೀಪ್ ಆಗಿರುತ್ತದೆ ಮತ್ತು ಬಹಳಷ್ಟು ಗಟ್ಟಿಯಾಗಿರುತ್ತದೆ. ಈ ಸಮಾಜದಲ್ಲಿ ಏನಾದರೂ ನಾವು ಒಳ್ಳೆ ಸಂಸ್ಕಾರ, ಪ್ರೀತಿ, ಗೌರವ ತೋರಿಸುವಂತದ್ದು ಏನಾದರೂ ಇದ್ದರೆ ಅವರಿಂದ ನಾವು ಕಲಿಬೇಕಾಗುತ್ತದೆ ಎಂದರು.

ಹಿರಿಯ ನಾಗರಿಕರ ಕಲ್ಯಾಣ ಕಾಯ್ದೆ 2007ರ ಅಡಿಯಲ್ಲಿ 60 ವರ್ಷ ಆದಂತಹ ಹಿರಿಯ ನಾಗರಿಕರಿಗೆ ಏನಾದರೂ ಮನೆಯಲ್ಲಿ ಮಕ್ಕಳು ಉಪಜೀವನಕ್ಕೆ ಅಥವಾ ಅವರ ದೈನಂದಿನ ಜೀವನ ನಡೆಸಲಿಕ್ಕೆ ತೊಂದರೆ ನೀಡಿದರೆ ಕಾನೂನಿನ ಅಡಿಯಲ್ಲಿ ಸಹಾಯ ಪಡೆಯಬಹುದು. ಹಿರಿಯ ನಾಗರಿಕರು ಯಾವುದೇ ರೀತಿಯ ಅನ್ಯಾಯಕ್ಕೆ ಒಳಗಾದಾಗ ಮುಕ್ತವಾಗಿ ತಮ್ಮ ಕಚೇರಿಗೆ ಅಥವಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಆಫೀಸ್ ಭೇಟಿ ನೀಡಿ ಪರಿಹಾರ ಪಡೆದುಕೊಳ್ಳಬಹುದಾಗಿದೆ ಎಂದರು.

ಈ ವೇಳೆ ನಿವೃತ್ತ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಡಾ.ಶಂಕರಗೌಡ ಅವರು ಮಾತನಾಡಿ, 60 ವರ್ಷ ಮೇಲ್ಪಟ್ಟ ಎಲ್ಲಾ ಹಿರಿಯ ನಾಗರಿಕರ ಆರೋಗ್ಯ ಮತ್ತು ರಕ್ಷಣೆಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಕಾನೂನು ಅರಿವು ಕಾರ್ಯಕ್ರಮಗಳು, ಡೇ ಕೇರ್ ಸೆಂಟರ್‌ಗಳು ಮತ್ತು ಸುರಕ್ಷಾ ಸಂಸ್ಥೆಗಳ ಮೂಲಕ ಹಲವು ಸೌಲಭ್ಯಗಳನ್ನು ಕಲ್ಪಿಸುತ್ತಿವೆ. ಅಲ್ಲದೆ ಹಿರಿಯ ನಾಗರಿಕರ ಕಲ್ಯಾಣ ಸಮಿತಿಯ ನೇತೃತ್ವದಲ್ಲಿ ಕಾನೂನು ನೆರವು, ಪಿಂಚಣಿ ಅಥವಾ ಇತರೆ ಯಾವುದೇ ಸಮಸ್ಯೆಗಳಿದ್ದರೂ ಅವುಗಳನ್ನು ಸಮಾಧಾನಕರವಾಗಿ ಬಗೆಹರಿಸಿ ಎಲ್ಲರಿಗೂ ಸೂಕ್ತ ಅನುಕೂಲ ಕಲ್ಪಿಸಲಾಗುತ್ತಿದೆ ಎಂದರು.

ಈ ವೇಳೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಡಾ.ಜಿ.ಸುರೇಶ ಅವರು ಮಾತನಾಡಿ, ಹಿರಿಯ ನಾಗರಿಕರು ನಮ್ಮ ಕುಟುಂಬದ ಕಣ್ಣುಗಳಿದ್ದಂತೆ ಅವರು ಸಮಾಜವನ್ನು ಒಳ್ಳೆಯ ದಾರಿಯಲ್ಲಿ ನಡೆಸಲು ಪ್ರಮುಖ ಪಾತ್ರ ವಹಿಸುತ್ತಾರೆ. ಹಿರಿಯ ನಾಗರಿಕರು ತಂದೆ-ತಾಯಿಗಳಾಗಿ, ಅಜ್ಜ-ಅಜ್ಜಿಯಾಗಿ ಕುಟುಂಬಕ್ಕೆ ಮಾರ್ಗದರ್ಶನ ನೀಡುತ್ತಾ ಬಂದಿದ್ದಾರೆ. ಇತ್ತೀಚಿನ ದಿನಗಳಲ್ಲಿ ಹಿರಿಯ ನಾಗರಿಕರ ಕಡೆಗೆ ನಿರ್ಲಕ್ಷ್ಯ ಹೆಚ್ಚಾಗುತ್ತಿದ್ದು, ಅವರ ಹಕ್ಕುಗಳು ಹಾಗೂ ಯೋಗಕ್ಷೇಮದ ಬಗ್ಗೆ ಕಾಳಜಿ ವಹಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಸರ್ಕಾರದಿಂದ ಹಿರಿಯ ನಾಗರಿಕರಿಗಾಗಿ ಅನೇಕ ಯೋಜನೆಗಳು ಮತ್ತು ಸೌಲಭ್ಯಗಳಿದ್ದರೂ, ಅವುಗಳು ಅರ್ಹರಿಗೆ ತಲುಪುವಲ್ಲಿ ಇನ್ನಷ್ಟು ಜಾಗೃತಿ ಮೂಡಿಸಬೇಕಿದೆ ಎಂದರು.

ಈ ವೇಳೆ ವಿಶ್ವ ಹಿರಿಯ ನಾಗರಿಕರ ದಿನಾಚರಣೆಯ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ವಿವಿಧ ಸ್ಪರ್ಧೆಯಲ್ಲಿ ವಿಜೇತರಾದ ಹಿರಿಯ ನಾಗರಿಕರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಶರಣಮ್ಮ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಸರಸ್ವತಿ, ಮಹಾನಗರ ಪಾಲಿಕೆಯ ಪರಿಸರ ವಿಭಾಗದ ಸಹಾಯಕ ಅಭಿಯಂತರರಾದ ಜೈಪಾಲ ರೆಡ್ಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವೆಂಕಟೇಶ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕುಮಾರ್, ಸಮಾಜ ಸೇವಕರಾದ ಸೋಮನಾಥ ಭಂಡಾರಿ ಸೇರಿದಂತೆ ಹಿರಿಯ ನಾಗರಿಕರು, ವಿವಿಧ ಸಂಘ-ಸಸ್ಥೆಯ ಮುಖಂಡರು, ಮಹಿಳೆಯರು ಇದ್ದರು.

ಗಿರಿಜವ್ವ ಅಕ್ಕಿ ಅವರು ಕಾರ್ಯಕ್ರಮವನ್ನು ನಿರೂಪಿಸಿದರು. ದಂಡಪ್ಪ ಬಿರಾದಾರ್ ಅವರು ಕಾರ್ಯಕ್ರಮದಲ್ಲಿ ಸ್ವಾಗತಿಸಿ, ವಂದಿಸಿದರು.

## ಮಳೆ-ಬೆಳೆ ಸಮೃದ್ಧಿಗಾಗಿ ಸರ್ವಧರ್ಮ ಗುರುಗಳಿಂದ ಸಾಮೂಹಿಕ ಪ್ರಾರ್ಥನೆ

ವಿಶೇಷವಾಗಿದೆ. ನಾಡಿನಲ್ಲಿ ಉತ್ತಮ ಮಳೆಯಾಗಿ ಬೆಳೆ ಸಮೃದ್ಧಿಯಾಗಲಿ ಹಾಗೂ ಜನರ ಸಂಕಷ್ಟಗಳು ನಿವಾರಣೆಯಾಗಲಿ ಎಂದು ಶಾಸಕ ಹಂಪಯ್ಯ ನಾಯಕ ಆಶಿಸಿದರು.

ಸುವರ್ಣಗಿರಿ ಮಠದ ಶಂಕರಯ್ಯ ಸ್ವಾಮಿ, ಮುಸ್ಲಿಂ ಧರ್ಮಗುರು ಸೈಯದ್ ಖಮರುದ್ದೀನ್ ಖಾದ್ರಿ ಸಾಹೇಬ್, ದರ್ಗಾ ಸಜ್ಜಾದಾ ನಶೀನ್ ಹಜರತ್ ಸೈಯದ್ ಷಾ ಇರ್ಫಾನ್ ಖಾದ್ರಿ ಸಾಹೇಬ್, ಕವಿತಾಳ ಮೆಥೋಡಿಸ್ಟ್ ಚರ್ಚ್‌ನ ರೆವರೆಂಡ್ ಸೂರ್ಯದಾಸ್ ಸೇರಿದಂತೆ ವಿವಿಧ ಧರ್ಮಗಳ ಗುರುಗಳು ಮಳೆ-ಬೆಳೆ ಸಮೃದ್ಧಿಗಾಗಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಸರ್ವಧರ್ಮ ಸೇವಾ ವೆಲ್ಫೇರ್ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷ ಡಾ. ಹನುಮಂತ ಕೋಟೆ, ಬಾಲಸ್ವಾಮಿ ಕೊಡ್ಲಿ, ತಿಪ್ಪಣ್ಣ ಬಾಗಲವಾಡ, ಈರೇಶ ಹುಲುಗುಂಚಿ, ಸಾಹಿರಬಾನು, ಶರಣ ಮುದಂಗುಡ್ಡಿ, ಯೋಗೇಶ ಸೇರಿದಂತೆ ಹಲವರು ಭಾಗವಹಿಸಿದ್ದರು.

## ಕವಿಗೋಷ್ಠಿಗೆ ಹೆಸರು ನೋಂದಾಣಿಗೆ ಸೂಚನೆ

ರಾಯಚೂರು ಅ. 01 (ಕರ್ನಾಟಕ ವಾರ್ತೆ): ರಾಯಚೂರು ಮಹಾನಗರ ಪಾಲಿಕೆಯ ವತಿಯಿಂದ 2026-27ನೇ ಸಾಲಿನಲ್ಲಿ ಆಚರಣೆ ಮಾಡುವ ನಾಡ ಹಬ್ಬ ದಸರಾ ಅಂಗವಾಗಿ ಕವಿಗೋಷ್ಠಿಯನ್ನು ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ಸ್ಥಳೀಯ ಆಸಕ್ತ ಕವಿಗಳ ಹೆಸರುಗಳನ್ನು ನೋಂದಾಯಿಸಿಕೊಳ್ಳುವತೆ ಮಹಾನಗರ ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕವಿಗೋಷ್ಠಿಯಲ್ಲಿ ಭಾಗವಹಿಸಲು ಆಸಕ್ತಿಯಿರುವ ಕವಿಗಳು ತಮ್ಮ ಹೆಸರು, ವಿಳಾಸ, ಮೊಬೈಲ್ ಸಂಖ್ಯೆ ಸೇರಿದಂತೆ ಅಗತ್ಯ ವಿವರಗಳನ್ನು ಶ್ರೀ ಕೃಷ್ಣಾ ಕಟ್ಟಿಮನಿ ಸಮುದಾಯ ಸಂಘಟನಾಧಿಕಾರಿ ರಾಯಚೂರು ಮಹಾನಗರಪಾಲಿಕೆ ಇವರ ಮೊಬೈಲ್ 9535100867 ಸಂಖ್ಯೆಗೆ ಕರೆ ಮಾಡಿ ತಿಳಿದುಕೊಳ್ಳಬಹುದು ಅಥವಾ ವಾಟ್ಸ್‌ಆ್ಯಪ್ ಮೂಲಕ ದಿನಾಂಕ:08.10.2026ರೊಳಗಾಗಿ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಮೃತ ವಾಣಿ

ಸ್ವಾರ್ಥ ವಿಲ್ಲದ ಬದುಕು ಸರ್ವಕಾಲಕ್ಕೂ ಶ್ರೇಷ್ಠ.

## 1603 ನೇಯ ದಿನಕ್ಕೆ ಏಮ್ಸ್ ಹೋರಾಟ

## ಕೊಪ್ಪಳ ಜಿಲ್ಲಾಡಳಿತ ಭವನದ ಆವರಣದಲ್ಲಿ ಅಧಿಕಾರಿಗಳು, ಸಿಬ್ಬಂದಿಯಿಂದ ಶ್ರಮದಾನ



ಕೊಪ್ಪಳ ಅ. 01 (ಕರ್ನಾಟಕ ವಾರ್ತೆ): ಮಹಾತ್ಮ ಗಾಂಧೀಜಿಯವರ 157ನೇ ಜಯಂತಿ ಆಚರಣೆ ಪ್ರಯುಕ್ತ ಅಕ್ಟೋಬರ್ 01ರಂದು ಶ್ರಮದಾನ ಕಾರ್ಯಕ್ರಮವು ಜಿಲ್ಲಾಡಳಿತ ಭವನದ ಆವರಣದಲ್ಲಿ ನಡೆಯಿತು.

ಗಾಂಧೀಜಿಯವರು ಸಾರಿದ ಶ್ರಮ ಸಂಸ್ಕೃತಿ ಮತ್ತು ಸ್ವಚ್ಛತೆಯ ಮಹತ್ವ ಸಾರುವ ಉದ್ದೇಶದಿಂದ ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಬಿ. ಇಟ್ನಾಳ ಅವರ ಮಾರ್ಗದರ್ಶನದಲ್ಲಿ ನಡೆದ ಶ್ರಮದಾನ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ಬೆಳಗ್ಗೆ ಕಚೇರಿ ಕೆಲಸ ಮುಗಿಸಿ ಸಂಜೆ ವೇಳೆಗೆ ಶ್ರಮದಾನದಲ್ಲಿ ಭಾಗಿಯಾದ ಅಧಿಕಾರಿಗಳು ಮತ್ತು ಸಿಬ್ಬಂದಿಯು ಕಸಬಾರಿಗೆ, ಸಲಿಕೆ, ಬುಟ್ಟಿ ಹಿಡಿದು ಪೌರ ಕಾರ್ಮಿಕರೊಂದಿಗೆ ಸ್ವಚ್ಚತಾ ಕಾರ್ಯಕ್ರಮದಲ್ಲಿ ಭಾಗಿಯಾದರು.

ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ನಗರಾಭಿವೃದ್ಧಿ ಕೋಶ, ಕೊಪ್ಪಳ ನಗರಸಭೆ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಶ್ರಮದಾನ ಕಾರ್ಯಕ್ರಮಕ್ಕೆ ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ ಅವರು ಅವರು ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅಪರ ಜಿಲ್ಲಾಧಿಕಾರಿಗಳು, ಸ್ವಚ್ಛತೆಯು ಕೇವಲ ಒಂದು ದಿನದ ಆಚರಣೆಯಾಗದೆ ನಮ್ಮ ಜೀವನದ ಮೂಲ ಧ್ಯೇಯವಾಗಬೇಕು. ನಮ್ಮ ಮನೆಯಿಂದ ಆರಂಭವಾಗುವ ಸ್ವಚ್ಛತಾ ಕಾರ್ಯದ ಸಂದೇಶವು ನಮ್ಮ ಕಚೇರಿ ಹಾಗೂ ಇಡೀ ಸಮಾಜಕ್ಕೆ ವಿಸ್ತರಿಸಬೇಕು ಎಂದು ಹೇಳಿದರು.

ಜಿಲ್ಲಾಧಿಕಾರಿಗಳಿಂದ ಮೆಚ್ಚುಗೆ: ಗಾಂಧೀ ಜಯಂತಿಯ ಅಂಗವಾಗಿ ನಡೆದ ಶ್ರಮದಾನ ಕಾರ್ಯಕ್ರಮದಲ್ಲಿ ಭಾಗಿಯಾದ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು, ಸ್ವಚ್ಛತಾ ಕಾರ್ಯದಲ್ಲಿ ಅತ್ಯಂತ ಉತ್ಸಾಹದಿಂದ ಪಾಲ್ಗೊಂಡಿದ್ದ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಯ ಕಾರ್ಯವೈಖರಿಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ನಗರಸಭೆಯಿಂದ ಇನ್ನು ಹೆಚ್ಚಿನ ರೀತಿಯಲ್ಲಿ ಸ್ವಚ್ಛತಾ ಕಾರ್ಯಗಳು ನಡೆಯುವಂತಾಗಬೇಕು ಎಂದು ಇದೆ ವೇಳೆ ಜಿಲ್ಲಾಧಿಕಾರಿಗಳು ನಗರಸಭೆಯ ಅಧಿಕಾರಿಗಳಿಗೆ ಸಲಹೆ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ, ಸಹಾಯಕ ಆಯುಕ್ತರಾದ ಮಹೇಬೂಬ್ ಜೀಲಾನಿ ಖುರೇಶಿ, ಪೌರಾಯುಕ್ತರಾದ ಮಂಜುನಾಥ ಗುಂಡೂರು, ಜಿಲ್ಲಾ ವಾರ್ತಾಧಿಕಾರಿಗಳಾದ ಗವಿಸಿದ್ದಪ್ಪ ಹೊಸಮನಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

ನಗರಸಭೆಯಿಂದ ಸಹಕಾರ: ಶ್ರಮದಾನದಲ್ಲಿ ಭಾಗಿಯಾದ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ನಗರಸಭೆಯಿಂದ ಹ್ಯಾಂಡ್ ಗ್ಲೌಸ್, ಮಾಸ್ಕ ವಿತರಣೆ, ಕ್ಯಾಪ್ ವಿತರಣೆ ಮಾಡಲಾಯಿತು. ಸ್ವಚ್ಛತಾ ಕಾರ್ಯಕ್ರಮಕ್ಕೆ ಸಲಿಕೆ, ಕಸಬಾರಿಗೆ ಸೇರಿದಂತೆ ಸ್ವಚ್ಛತೆಗೆ ಬೇಕಾಗುವ ಪರಿಕರಗಳನ್ನು ಸಹ ನಗರಸಭೆಯಿಂದ ಪೂರೈಸಲಾಯಿತು. ಪೌರ ಕಾರ್ಮಿಕರನ್ನು ಮತ್ತು ಕಸವಿಲೇವಾರಿ ವಾಹನಗಳನ್ನು ಒದಗಿಸಿ ನಗರಸಭೆ ಪೌರಾಯುಕ್ತರು ಈ ಕಾರ್ಯಕ್ರಮಕ್ಕೆ ಅಗತ್ಯ ಸಹಕಾರ ನೀಡಿದರು.



ಮಹಾತ್ಮ ಗಾಂಧೀಜಿ
ಅವರ 157 ನೇ ಜನ್ಮದಿನಾಚರಣೆ

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ



ಲಾಲ್ ಬಹದ್ದೂರ್ ಶಾಸ್ತ್ರಿ
ಅವರ 122 ನೇ ಜನ್ಮದಿನಾಚರಣೆ

# ನನ್ನ ಜೀವನವೇ ನನ್ನ ಸಂದೇಶ



## ನಾಡಿನ ಸಮಸ್ತ ಜನತೆಗೆ ಗಾಂಧಿ ಜಯಂತಿಯ ಹಾರ್ದಿಕ ಶುಭಾಶಯಗಳು

"ಎಲ್ಲ ಒಳ್ಳೆಯ ಕ್ರಿಯೆಗಳು
ಅಂತಿಮವಾಗಿ ಒಳ್ಳೆಯ ಫಲವನ್ನೇ ನೀಡುತ್ತವೆ
ಎನ್ನುವುದು ನನ್ನ ಅಚಲ ನಂಬಿಕೆ"

— mkGandhi

ಸತ್ಯ, ಅಹಿಂಸೆ, ಸರಳತೆ, ಸೇವೆ ಮತ್ತು ದೇಶಭಕ್ತಿಯ ಮೌಲ್ಯಗಳನ್ನು ತಮ್ಮ ಬದುಕಿನ ಮೂಲಕ ಸಾರಿದ **ರಾಷ್ಟ್ರಪಿತ ಮಹಾತ್ಮ ಗಾಂಧೀಜಿ** ಹಾಗೂ ಮಾಜಿ ಪ್ರಧಾನಮಂತ್ರಿ **ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜನ್ಮದಿನಾಚರಣೆಯಂದು, ಈ ಮಹಾನ್ ಚೇತನಗಳಿಗೆ ಗೌರವಪೂರ್ವಕ ನಮನಗಳು.**

### ಗಾಂಧೀಜಿಯವರ ಚಿಂತನೆಗಳು ಚಿರಂತನ; ಅವರ ಆದರ್ಶಗಳು ಸದಾ ಪ್ರಸ್ತುತ

"ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು"
-ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

CMofKarnataka https://dipr.karnataka.gov.in/ Karnatakavarthe

ಕರ್ನಾಟಕ ವಾರ್ತೆ

# ಇಂದು ಮಹಾತ್ಮ ಗಾಂಧೀಜಿ ಅವರ 157ನೇ ಜಯಂತಿ ಕಾರ್ಯಕ್ರಮ

ರಾಯಚೂರು ಅಕ್ಟೋಬರ್ 01 (ಕರ್ನಾಟಕ ವಾರ್ತೆ): ರಾಯಚೂರಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ರಾಯಚೂರು ಇವರುಗಳ ಸಂಯುಕ್ತಾಶ್ರಯದಲ್ಲಿ ಮಹಾತ್ಮ ಗಾಂಧೀಜಿಯ ಅವರ 157ನೇ ಜಯಂತಿಯ ಕಾರ್ಯಕ್ರಮವನ್ನು ನಗರದ ಮಹಾತ್ಮ ಗಾಂಧೀಜಿ ಜಿಲ್ಲಾ ಕ್ರೀಡಾಂಗಣ ಪುತ್ಥಳಿಯ ಆವರಣದಲ್ಲಿ ಅಕ್ಟೋಬರ್ 02ರ ಬೆಳಿಗ್ಗೆ 8ಗಂಟೆಗೆ ಕಾರ್ಯಕ್ರಮ ಜರುಗಲಿದೆ.

ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಹಾಗೂ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಸೇರಿದಂತೆ ಇತರರು ಬಾಗಿಯಾಗಲಿದ್ದಾರೆ.

ಇದಕ್ಕೂ ಮುಂಚೆ ಮಹಾನಗರ ಪಾಲಿಕೆ ವತಿಯಿಂದ ನಗರದ ಮಹಾತ್ಮಗಾಂಧಿ ವೃತ್ತದಲ್ಲಿ ಬೆಳಿಗ್ಗೆ 7ಕ್ಕೆ ಮಹಾತ್ಮಗಾಂಧಿ ಪುತ್ಥಳಿಗೆ ಪೂಜೆ ಮಾರ್ಲಾಪಣೆ ನೆರವೇರಿಸಲಾಗುವುದು.

ರಾಯಚೂರು ಮಹಾನಗರ ಪಾಲಿಕೆ ಜೋನಲ್-1ರ ಕಚೇರಿಯಲ್ಲಿ ಬೆಳಿಗ್ಗೆ 7.15ಕ್ಕೆ ಮಹಾತ್ಮಗಾಂಧಿ ಭಾವಚಿತ್ರಕ್ಕೆ ಪೂಜೆ ಮಾರ್ಲಾಪಣೆ ಪಾಲಿಕೆಯ ಆಯುಕ್ತರು ಅವರು ನೆರವೇರಿಸುವರು.

ಬೆಳಿಗ್ಗೆ 8ಕ್ಕೆ ಜಿಲ್ಲಾ ಕ್ರೀಡಾಂಗಣ ಮಹಾತ್ಮಗಾಂಧಿ ಪುತ್ಥಳಿ ಹತ್ತಿರ ರಾಮಧುನ ಹಾಗೂ ಸರ್ವಧರ್ಮ ಪ್ರಾರ್ಥನೆ ಸೇರಿದಂತೆ ಇತರೆ ಕಾರ್ಯಕ್ರಮಗಳು ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

# ಜಿಲ್ಲಾಡಳಿತದ ವತಿಯಿಂದ ಉಚಿತ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿಗೆ ವಿಷಯ ತಜ್ಞರಿಂದ ಅರ್ಜಿ ಆಹ್ವಾನ

ರಾಯಚೂರು ಅಕ್ಟೋಬರ್ 01 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲಾಡಳಿತ ವತಿಯಿಂದ ಜಿಲ್ಲೆಯ ಅರ್ಹ ಹಾಗೂ ಉದ್ಯೋಗಾಕಾಂಕ್ಷಿ ಯುವಕರಿಗೆ ಯುಪಿಎಸ್‌ಸಿ, ಕೆಪಿಎಸ್‌ಸಿ, ಕೆಇಎ, ಎಸ್‌ಎಸ್‌ಸಿ, ಬ್ಯಾಂಕಿಗ್, ರೈಲ್ವೆ, ಪೊಲೀಸ್, ರಕ್ಷಣಾ, ಅರಣ್ಯ, ಪಿಡಿಓ, ಎಫ್‌ಡಿಎ, ಎಸ್‌ಡಿಎ, ಪಿಎಸ್‌ಐ, ಪಿಸಿ ಸೇರಿದಂತೆ ವಿವಿಧ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸ್ಪರ್ಧಾತ್ಮಕ/ನೇಮಕಾತಿ ಪರೀಕ್ಷೆಗಳಿಗೆ ಉಚಿತ ಪೂರ್ವಸಿದ್ಧತಾ ತರಬೇತಿ ನೀಡಲಾಗುತ್ತಿದೆ.

ಈ ತರಬೇತಿ ಕಾರ್ಯಕ್ರಮಕ್ಕೆ ಅರ್ಹ, ಅನುಭವಿ ಹಾಗೂ ವಿಷಯ ಪರಿಣತಿ ಹೊಂದಿರುವ ವಿಷಯ ತಜ್ಞರು / ಅಧ್ಯಾಪಕರು / ಸಂಪನ್ಮೂಲ ವ್ಯಕ್ತಿಗಳನ್ನು ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪ್ರಮುಖ ವಿಷಯಗಳು: ಸಾಮಾನ್ಯ ಅಧ್ಯಯನ, ಭಾರತೀಯ ಇತಿಹಾಸ ಮತ್ತು ಕರ್ನಾಟಕ ಇತಿಹಾಸ, ಭಾರತೀಯ ಸಂವಿಧಾನ ಮತ್ತು ರಾಜಕೀಯ, ಭಾರತೀಯ ಹಾಗೂ ಕರ್ನಾಟಕ ಭೂಗೋಳಶಾಸ್ತ್ರ, ಅರ್ಥಶಾಸ್ತ್ರ, ವಿಜ್ಞಾನ ಮತ್ತು ತಂತ್ರಜ್ಞಾನ, ಪರಿಸರ, ಪ್ರಚಲಿತ ವಿದ್ಯಮಾನಗಳು, ಕರ್ನಾಟಕ ಸಾಮಾನ್ಯ ಜ್ಞಾನ, ಸಾಮಾನ್ಯ ಕನ್ನಡ, ಸಾಮಾನ್ಯ ಇಂಗ್ಲಿಷ್, ಗಣಿತ/ ಸಂಖ್ಯಾತ್ಮಕ ಸಾಮರ್ಥ್ಯ, ತಾರ್ಕಿಕ ಸಾಮರ್ಥ್ಯ, ಮಾನಸಿಕ ಸಾಮರ್ಥ್ಯ, ದತ್ತಾಂಶ ವಿಶ್ಲೇಷಣೆ, ಕಂಪ್ಯೂಟ/ರಡಿಜಿಟಲ್ ಅರಿವು, ಬ್ಯಾಂಕಿಗ್ ಮತ್ತು ಹಣಕಾಸು ಅರಿವು ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷಾ ವಿಷಯಗಳಲ್ಲಿ ಪರಿಣತಿ ಹೊಂದಿರುವವರಿದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹತೆ: ಅರ್ಜಿದಾರರು ಕನಿಷ್ಠ ಸ್ನಾತಕೋತ್ತರ ಪದವಿ ಹೊಂದಿರಬೇಕು ಹಾಗೂ ಕಡ್ಡಾಯವಾಗಿ ಸ್ಪರ್ಧಾತ್ಮಕ ಪರೀಕ್ಷಾ ಬೋಧನಾಕ್ಷೇತ್ರದಲ್ಲಿ ಕನಿಷ್ಠ10 ವರ್ಷಗಳ ಅನುಭವ ಹೊಂದಿರಬೇಕು. ಯುಪಿಎಸ್‌ಸಿ/ ಕೆಪಿಎಸ್‌ಸಿ/ ಕೆಇಎ/ ಎಸ್‌ಎಸ್‌ಸಿ/ ಬ್ಯಾಂಕಿಗ್/ ರೈಲ್ವೆ/ ಪೊಲೀಸ್/ ರಕ್ಷಣಾ ಮುಂತಾದ ಪರೀಕ್ಷೆಗಳಿಗೆ ತರಬೇತಿ ನೀಡಿದ ಅನುಭವ ಹೊಂದಿರುವವರಿಗೆ ಆದ್ಯತೆ ನೀಡಲಾಗುವುದು.

ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲೆಗಳು: ಶೈಕ್ಷಣಿಕ ಅರ್ಹತೆ ಮತ್ತು ಸ್ನಾತಕೋತ್ತರ ಪದವಿ ಪ್ರಮಾಣಪತ್ರ, ಕನಿಷ್ಠ 10 ವರ್ಷಗಳ ಸ್ಪರ್ಧಾತ್ಮಕ ಪರೀಕ್ಷಾ ಬೋಧನಾ ಅನುಭವದ ಪ್ರಮಾಣಪತ್ರಗಳು, ಈ ಹಿಂದೆ ತರಬೇತಿ ನೀಡಿದ ಸಂಸ್ಥೆಗಳ ವಿವರ, ಬೋಧನಾ ಸಾಧನೆ ವಿವರ, ಗುರುತಿನ ಚೀಟಿ, ಇತ್ತೀಚಿನ ಭಾವಚಿತ್ರ ಹಾಗೂ ಇತರೆ ಸಂಬಧಿತ ದಾಖಲೆಗಳ ಪ್ರತಿಗಳನ್ನು ಸಲ್ಲಿಸಬೇಕು.

ಅರ್ಜಿದಾರರು ತಮ್ಮ ಯೂಟ್ಯೂಬ್/ಆನ್‌ಲೈನ್ ಬೋಧನಾ ವೀಡಿಯೊ ಲಿಂಕ್ ಅನ್ನು ಕಡ್ಡಾಯವಾಗಿ ನೀಡಬೇಕು. ಲಭ್ಯವಿರುವ ಬೋಧನಾ ವೀಡಿಯೊಗಳನ್ನು ವಿಷಯ ನಿರೂಪಣೆ ಹಾಗೂ ಬೋಧನಾ ಸಾಮರ್ಥ್ಯ ಪರಿಶೀಲನೆಗೆ ಪರಿಗಣಿಸಲಾಗುವುದು.

ಆಯ್ಕೆ ವಿಧಾನ: ಅರ್ಜಿಗಳನ್ನು ಶೈಕ್ಷಣಿಕ ಅರ್ಹತೆ, ಬೋಧನಾ ಅನುಭವ, ವಿಷಯ ಪರಿಣತಿ ಹಾಗೂ ದಾಖಲೆಗಳ ಪರಿಶೀಲನೆಯ ಆಧಾರದ ಮೇಲೆ ಪರಿಶೀಲಿಸಲಾಗುವುದು. ಅಗತ್ಯವಿದ್ದಲ್ಲಿ ಆ ಅಟಚಿ/ಟಿಣಡಿಚಿಥಿಣಟಿ ನಡೆಸಿ ವಿಷಯ ತಜ್ಞರನ್ನು ಆಯ್ಕೆ ಮಾಡಲಾಗುವುದು.

ಗೌರವಧನ: ಆಯ್ಕೆಯಾದ ವಿಷಯ ತಜ್ಞರಿಗೆ ಪ್ರತಿ 1 ಗಂಟೆಯ ತರಗತಿಗೆ ರೂ.1,000/- (ರೂಪಾಯಿ ಒಂದು ಸಾವಿರ ಮಾತ್ರ) ಗೌರವಧನವನ್ನು ಕಾರ್ಯಕ್ರಮದ ನಿಯಮಗಳು ಮತ್ತು ಷರತ್ತುಗಳಿಗೆ ಒಳಪಟ್ಟು ಪಾವತಿಸಲಾಗುವುದು.

ಅರ್ಜಿ ಸಲ್ಲಿಸುವ ವಿಧಾನ: ಆಸಕ್ತ ಹಾಗೂ ಅರ್ಹ ವಿಷಯ ತಜ್ಞರು ಅಗತ್ಯ ದಾಖಲೆಗಳೊಂದಿಗೆ ತಮ್ಮ ಅರ್ಜಿಯನ್ನು ರೆಜಿಸ್ಟರ್ ಪೋಸ್ಟ್ ಮೂಲಕ ಜಿಲ್ಲಾಧಿಕಾರಿಗಳು ರಾಯಚೂರು. ಜಿಲ್ಲಾಡಳಿತ ಭವನ, ಯಕ್ಲಾಸಪುರ, ರಾಯಚೂರು 584101. ಲಕೋಟೆಯ ಮೇಲ್ಭಾಗದಲ್ಲಿ "APPLICATION FOR SUBJECT EXPERT Competitive Examination Training Programme'' ಎಂದು ನಮೂದಿಸಬೇಕು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 09.10.2026 ನಿಗದಿತ ದಿನಾಂಕದ ನಂತರ ತಲುಪುವ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. ಅಪೂರ್ಣ ಅರ್ಜಿಗಳು ಹಾಗೂ ಅಗತ್ಯ ದಾಖಲೆಗಳಿಲ್ಲದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಆಯ್ಕೆ ಪ್ರಕ್ರಿಯೆಗೆ ಸಂಬಧಿಸಿದತೆ ಜಿಲ್ಲಾಡಳಿತ, ರಾಯಚೂರು ಕೈಗೊಳ್ಳುವ ನಿರ್ಧಾರವು ಅಂತಿಮವಾಗಿರುತ್ತದೆ.

ಜಿಲ್ಲೆಯ ಯುವಕರಿಗೆ ಅನುಭವಿ ಹಾಗೂ ಗುಣಮಟ್ಟದ ವಿಷಯ ತಜ್ಞರಿಂದ ಉಚಿತ ಮತ್ತು ಫಲಿತಾಂಶಮುಖಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಒದಗಿಸುವ ಉದ್ದೇಶದಿಂದ ಈ ಆಯ್ಕೆ ಪ್ರಕ್ರಿಯೆ ಕೈಗೊಳ್ಳಲಾಗಿದ್ದು, ಅರ್ಹ ಹಾಗೂ ಅನುಭವಿ ವಿಷಯ ತಜ್ಞರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಗರದ ವಿವಿಧೆಡೆ ಎಲ್‌ಪಿಜಿ ಗ್ಯಾಸ್ ಸಿಲಿಂಡರ್‌ಗಳ ಅಕ್ರಮ ಮಾರಾಟಕ್ಕೆ ಕಡಿವಾಣ ಹಾಕಲು ಆಗ್ರಹ





ರಾಯಚೂರು, ಅ.1: ನಗರದಲ್ಲಿ ಅನುಮತಿ ಇಲ್ಲದೆ ಹೋಟೆಲ್, ಡಾಬಾ, ಕ್ಯಾಂಟೀನ್, ಮೊಬೈಲ್ ಶಾಪ್ ಸೇರಿದಂತೆ ವಿವಿಧೆಡೆ ಗೃಹಬಳಕೆಯ ಎಲ್‌ಪಿಜಿ ಗ್ಯಾಸ್ ಸಿಲಿಂಡರ್‌ಗಳನ್ನು ವಾಣಿಜ್ಯ ಉದ್ದೇಶಕ್ಕೆ ಬಳಸುವುದು ಹಾಗೂ ಅಕ್ರಮವಾಗಿ ಮಾರಾಟ ಮಾಡುತ್ತಿರುವುದಕ್ಕೆ ಕಡಿವಾಣ ಹಾಕಿ, ಸಂಬಂಧಪಟ್ಟವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ನಮ್ಮ ಕರ್ನಾಟಕ ಸೇನೆ ರಾಯಚೂರು ಜಿಲ್ಲಾ ಘಟಕ ಒತ್ತಾಯಿಸಿದೆ.

ಈ ಕುರಿತು ಸಂಘಟನೆಯ ಪದಾಧಿಕಾರಿಗಳು ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿ, ರಾಯಚೂರು ನಗರದ ವಿವಿಧ ಪ್ರದೇಶಗಳಲ್ಲಿ ಗೃಹಬಳಕೆಗೆ ನೀಡಲಾಗುವ ಎಲ್‌ಪಿಜಿ ಸಿಲಿಂಡರ್‌ಗಳನ್ನು ಹೋಟೆಲ್, ಡಾಬಾ, ಕ್ಯಾಂಟೀನ್ ಸೇರಿದಂತೆ ವಾಣಿಜ್ಯ ಚಟುವಟಿಕೆಗಳಿಗೆ ಬಳಸಲಾಗುತ್ತಿದೆ. ಅಲ್ಲದೆ, ಕೆಲವೆಡೆ ಸಿಲಿಂಡರ್‌ಗಳನ್ನು ಅನಧಿಕೃತವಾಗಿ ಸಂಗ್ರಹಿಸಿ ಮಾರಾಟ ಮಾಡಲಾಗುತ್ತಿದೆ ಎಂಬ ಆರೋಪಗಳು ಕೇಳಿಬರುತ್ತಿವೆ ಎಂದು ಗಮನ ಸೆಳೆದರು.

ನಗರದ ಕೆಲವು ಹೋಟೆಲ್‌ಗಳಲ್ಲಿ ಗೃಹಬಳಕೆಯ ಗ್ಯಾಸ್ ಸಿಲಿಂಡರ್‌ಗಳನ್ನು ಬಳಸುತ್ತಿರುವುದು ಕಂಡುಬರುತ್ತಿದ್ದು, ಇಂತಹ ಅಕ್ರಮ ಚಟುವಟಿಕೆಗಳಿಂದ ಸರ್ಕಾರದ ಸಬ್ಸಿಡಿ ಸೌಲಭ್ಯದ ದುರುಪಯೋಗವಾಗುವುದರ ಜೊತೆಗೆ ಸಾರ್ವಜನಿಕ ಸುರಕ್ಷತೆಗೂ ಅಪಾಯ ಉಂಟಾಗುವ ಸಾಧ್ಯತೆ ಇದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್‌ಗಳನ್ನು ವಾಣಿಜ್ಯ ಉದ್ದೇಶಕ್ಕೆ ಬಳಸುವ ಹಾಗೂ ಅನಧಿಕೃತವಾಗಿ ಸಂಗ್ರಹಿಸಿ ಮಾರಾಟ ಮಾಡುವ ಸ್ಥಳಗಳ ಮೇಲೆ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ಪೊಲೀಸ್ ಇಲಾಖೆ ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಜಂಟಿಯಾಗಿ ಪರಿಶೀಲನೆ ನಡೆಸಬೇಕು. ನಿಯಮ ಉಲ್ಲಂಘನೆ ಕಂಡುಬಂದಲ್ಲಿ ಕಾನೂನು ಪ್ರಕಾರ ಕ್ರಮ ಕೈಗೊಳ್ಳಬೇಕು ಎಂದು ಸಂಘಟನೆ ಆಗ್ರಹಿಸಿದೆ.

ಅಕ್ರಮ ಸಿಲಿಂಡರ್ ಮಾರಾಟ ಮತ್ತು ಬಳಕೆಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ನಗರ ವ್ಯಾಪ್ತಿಯಲ್ಲಿ ನಿಯಮಿತ ತಪಾಸಣೆ ನಡೆಸಿ, ಗೃಹಬಳಕೆಯ ಸಿಲಿಂಡರ್‌ಗಳು ವಾಣಿಜ್ಯ ಉದ್ದೇಶಕ್ಕೆ ಬಳಕೆಯಾಗದಂತೆ ಕಟ್ಟುನಿಟ್ಟಿನ ನಿಗಾ ವಹಿಸಬೇಕು ಎಂದು ಮನವಿ ಮಾಡಲಾಗಿದೆ.

ಈ ಸಂದರ್ಭದಲ್ಲಿ ನಮ್ಮ ಕರ್ನಾಟಕ ಸೇನೆ ಅಧ್ಯಕ್ಷ ಕೊಂಡಪ್ಪ ರಘುನಾಥ್, ಸೂರಿ, ನವೀನ್, ಮಹೇಶ್ ಪಾಟೀಲ್ ಹಾಗೂ ನಾಗರಾಜ್ ಉಪಸ್ಥಿತರಿದ್ದು ಮನವಿ ಪತ್ರ ಸಲ್ಲಿಸಿದರು.

# ರಸ್ತೆ ದುರಸ್ತೆಗೆ 18 ನೇ ವಾರ್ಡ ಜನರು : ಶಾಸಕ ವಜ್ಜಲ್ ಅವರಿಗೆ ಮನವಿ



ಲಿಂಗಸುಗೂರ: ಪಟ್ಟಣದ 17 ಹಾಗೂ 18 ನೇ ವಾರ್ಡನಲ್ಲಿ ಪರಿಶೀಲನೆಗೆ ಶಾಸಕ ಮನಪ್ಪ ವಜ್ಜಲ್ ಆಗಮಿಸಿದಾಗ ಆ ವಾರ್ಡನ ಜನರು ರಸ್ತೆ ಕಳೆದ 20 ವರ್ಷಗಳ ಹಿಂದೆ ಆಗಿದ್ದು ಕಾರಣ ತಮ್ಮ ಶಾಸಕ ಅನುದಾನದಲ್ಲಿ ಸಿಸಿ ರಸ್ತೆ ಮಾಡಲು ಶಾಸಕರಿಗೆ ಮನವಿ ಮಾಡಿದರು.

ಶಾಸಕ ಮಾನಪ್ಪ ವಜ್ಜಲ್ ಮನವಿ ಸ್ವೀಕರಿಸಿ ರಸ್ತೆಗಳನ್ನು ಪರಿಶೀಲಿಸಿ ಮುಂದಿನ ಅನುದಾನದಲ್ಲಿ ರಸ್ತೆ ಸಮಗ್ರ ದುರಸ್ತೆ ಮಾಡಿಸುವುದಾಗಿ ತಿಳಿಸಿದರು ಹಾಗೂ ಬಾಕಿರುವ ಸಿಸಿ ರಸ್ತೆ ಕಾಮಗಾರಿ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚಿಸಿದರು. ಈ ಸಂಧರ್ಬದಲ್ಲಿ ಬಿಜೆಪಿ ಮುಖಂಡರಾದ ಗಿರಿಮಲ್ಲಣಗೌಡ, ವೆಂಕನಗೌಡ ಐದನಾಳ, ವಾರ್ಡನ ನಿವಾಸಿಗಳಾದ ಮಲ್ಲಿಕಾರ್ಜುನ, ದಶರಥ ಮೀರಜ್ಕರ್ ಡಿ.ಬಿ ಸೋಮನಮರಡಿ, ಅಶೋಕ ಬಿಜಾಪುರ, ಶರಣಪ್ಪ ಗೋನವಾರ, ಬಾಲಕೃಷ್ಣ ಒಡೆಯರ ಪುರಸಭೆ ಅಧಿಕರಿಗಳು ಇದ್ದರು.

# ರಕ್ತದಾನದಿಂದ ಇನ್ನೊಬ್ಬರ ಜೀವದ ರಕ್ಷಣೆ ಡಾ. ಎಚ್. ಬಿ. ತಳ್ಳಳ್ಳಿ




ಲಿಂಗಸುಗೂರು: ರಾಷ್ಟ್ರೀಯ ಸ್ವಯಂ ಪ್ರೇರಿತ ರಕ್ತದಾನ ದಿನದ ಅಂಗವಾಗಿ ಏರ್ಪಡಿಸಿದ ರಕ್ತದಾನ ಕಾರ್ಯಕ್ರಮವು ಕೇವಲ ಕಾರ್ಯಕ್ರಮವಾಗಿರದೇ ಪುಣ್ಯದ ಕೆಲಸವಾಗಿದೆ ಎಂದು ಲಿಂಗಸುಗೂರಿನ ಸಾರ್ವಜನಿಕ ಆಸ್ಪತ್ರೆಯ ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಹನುಮಂತ. ಬಿ. ತಳ್ಳಳ್ಳಿ ಸಂತಸ ವ್ಯಕ್ತಪಡಿಸಿದರು.

ಅವರು ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಯೂತ್ ರೆಡ್ ಕ್ರಾಸ್ ಘಟಕ ಹಾಗೂ ಹಟ್ಟಿ ಚಿನ್ನದ ಗಣಿ ಕಂಪನಿ ನಿ. ಆಸ್ಪತ್ರೆ ಹಟ್ಟಿ ಇವರ ಸಹಯೋಗದಲ್ಲಿ ರಾಷ್ಟ್ರೀಯ ಸ್ವಯಂ ಪ್ರೇರಿತ ರಕ್ತದಾನ ದಿನದ ಅಂಗವಾಗಿ ಆಯೋಜಿಸಿದ ಸ್ವಯಂ ಪ್ರೇರಿತ ರಕ್ತದಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತ ವಿಜ್ಞಾನ ಎಷ್ಟೇ ಮುಂದುವರೆದರು ಕೃತಕ ರಕ್ತ ಉತ್ಪಾದನೆಯನ್ನು ಕಂಡುಹಿಡಿಯಲಾಗಿಲ್ಲ. ರಕ್ತದ ಉತ್ಪಾದನೆಯು ಮಾನವ ದೇಹದಲ್ಲಿ ಉತ್ಪಾದನೆಯಾಗುವುದು, ಉತ್ಪಾದನೆಯಾದ ರಕ್ತವನ್ನು ಪ್ರತಿಯೊಬ್ಬರು ದಾನ ಮಾಡಬಹುದು. ರಕ್ತದಾನ ಮಾಡುವುದರಿಂದ ಜೀವ ಉಳಿಸಿದ ಸಾರ್ಥಕತೆಯ ಜೊತೆಗೆ ಆರೋಗ್ಯ ವೃದ್ಧಿಯಾಗುವುದು. ಹೃದಯಾಘಾತ ಕೊಲೆಸ್ಟ್ರಾಲ್ ನಿಯಂತ್ರಣ ಮುಂತಾದ ಅನುಕೂಲಗಳು ರಕ್ತದಾನದಿಂದ ಲಭಿಸುತ್ತವೆ. ವಿದ್ಯಾರ್ಥಿಗಳು ಯುವ ಸಮುದಾಯದವರಲ್ಲಿ ರಕ್ತದಾನದ ಮಹತ್ವದ ಕುರಿತು ಅರಿವು ಮೂಡಿಸುವ ಜವಬ್ದಾರಿ ನಮ್ಮ ಮೇಲಿದೆ ಎಂದು ಹೇಳಿದರು.

ರೆಡ್ ಕ್ರಾಸ್ ಘಟಕದ ಸಂಯೋಜಕ ಆಂಜನೇಯ ರಾಮತ್ನಾಳ ಮಾತನಾಡಿ ರಕ್ತ ಮಾರಾಟಕ್ಕಿಲ್ಲ ರಕ್ತದಾನ ಮಾಡಬಹುದು ದಯವೇ ಧರ್ಮದ ಮೂಲ ಎಂಬ ಮಾತನ್ನು ಅರಿತು ದಯೆ ಅಂತಕರಣದಿದ ರಕ್ತದಾನ ಮಾಡಿ ಜೀವ ಉಳಿಸುವ ಶಕ್ತಿ ವಿದ್ಯಾರ್ಥಿಗಳಲ್ಲಿ ಮೂಡಲಿ ಎನ್ನುವ ಕಾರಣದಿಂದ ರಾಷ್ಟ್ರೀಯ ಸ್ವಯಂ ಪ್ರೇರಿತ ರಕ್ತದಾನ ದಿನದಂದು ವಿದ್ಯಾರ್ಥಿಗಳಲ್ಲಿ ಜಾಗೃತಿ ಉಂಟು ಮಾಡಲು ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು.

ಹಟ್ಟಿ ಚಿನ್ನದ ಗಣಿ ಕಂಪನಿ ನಿ. ಆಸ್ಪತ್ರೆಯ ಹಿರಿಯ ವೈದ್ಯಾಧಿಕಾರಿ ಡಾ. ಆನಂದ ಎಂ. ಕೆ ಅಧ್ಯಕ್ಷತೆ ವಹಿಸಿದ್ದರು ಪ್ರಾಂಶುಪಾಲ ಡಾ. ವೆಂಕಟನಾರಾಯಣ ಮಾತನಾಡಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾ ಆರೋಗ್ಯ ಶಿಕ್ಷಣ ಅಧಿಕಾರಿ ಪ್ರಾಣೇಶ ಜೋಶಿ, ಐಕ್ಯೂಎಸಿ ಸಂಯೋಜಕ ಡಾ. ಸಂಗನಗೌಡ, ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ಹನುಮಂತಪ್ಪ, ಸಹಾಯಕ ಪ್ರಾಧ್ಯಾಪಕ ದೊಡ್ಡಬಸಪ್ಪ ಹುಡೇದಗಡ್ಡಿ, ಶಾಮೀದ್ ಅಲಿ, ಡಾ. ಹುಲಗಪ್ಪ ಬುದ್ದಿನ್ನಿ, ಡಾ. ಮಹಾದೇವಪ್ಪ ನಾಗರಾಳ ಇತರರು ಇದ್ದರು.

# ಶ್ರೀಮಠದ ಹುಂಡಿಯಲ್ಲಿ ₹3.04 ಕೋಟಿ ಕಾಣಿಕೆ ಸಂಗ್ರಹ



ಮಂತ್ರಾಲಯ, ಅ.1: ಪ್ರಸಿದ್ಧ ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿ ಮಠದ ಸೆಪ್ಟೆಂಬರ್ ತಿಂಗಳ ಹುಂಡಿ ಕಾಣಿಕೆ ಎಣಿಕೆ ಕಾರ್ಯ ಪೂರ್ಣಗೊಂಡಿದ್ದು, 22 ದಿನಗಳ ಅವಧಿಯಲ್ಲಿ ಒಟ್ಟು ₹3,04,37,906 ಕಾಣಿಕೆ ಸಂಗ್ರಹವಾಗಿದೆ.

ಅಕ್ಟೋಬರ್ 1ರಂದು ಶ್ರೀಮಠದ ಹುಂಡಿಗಳನ್ನು ತೆರೆಯಲಾಗಿದ್ದು, ಭಕ್ತರು ಸಮರ್ಪಿಸಿದ ಕಾಣಿಕೆಗಳ ಎಣಿಕೆ ಕಾರ್ಯ ಕೈಗೊಳ್ಳಲಾಯಿತು. ಎಣಿಕೆ ಪೂರ್ಣಗೊಂಡ ಬಳಿಕ ನಗದು ರೂಪದಲ್ಲಿ ₹2,96,07,906 ಹಾಗೂ ನಾಣ್ಯಗಳ ರೂಪದಲ್ಲಿ ₹8,30,000 ಸಂಗ್ರಹವಾಗಿರುವುದು ತಿಳಿದುಬಂದಿದೆ.

ಇದರೊಂದಿಗೆ ಹುಂಡಿಯಲ್ಲಿ ನಗದು ಮತ್ತು ನಾಣ್ಯ ಸೇರಿ ಒಟ್ಟು ₹3,04,37,906 ಕಾಣಿಕೆ ಸಂಗ್ರಹವಾಗಿದೆ. ದೇಶದ ವಿವಿಧ ಭಾಗಗಳಿಂದ ಮಂತ್ರಾಲಯಕ್ಕೆ ಆಗಮಿಸುವ ಭಕ್ತರು ಶ್ರೀ ರಾಘವೇಂದ್ರ ಸ್ವಾಮಿಗಳಿಗೆ ಭಕ್ತಿಪೂರ್ವಕವಾಗಿ ಸಲ್ಲಿಸಿರುವ ಕಾಣಿಕೆ ಇದಾಗಿದೆ.

ಹಣದ ಜೊತೆಗೆ ಭಕ್ತರು ಚಿನ್ನ ಮತ್ತು ಬೆಳ್ಳಿಯನ್ನೂ ಕಾಣಿಕೆಯಾಗಿ ಸಮರ್ಪಿಸಿದ್ದು, ಹುಂಡಿ ಎಣಿಕೆಯಲ್ಲಿ 48 ಗ್ರಾಂ ಚಿನ್ನ ಹಾಗೂ 285 ಗ್ರಾಂ ಬೆಳ್ಳಿ ಸಂಗ್ರಹವಾಗಿದೆ.

ಶ್ರೀಮಠದ ಆಡಳಿತ ವ್ಯವಸ್ಥೆಯ ಮೇಲ್ವಿಚಾರಣೆಯಲ್ಲಿ ಹುಂಡಿ ಎಣಿಕೆ ಪ್ರಕ್ರಿಯೆ ಪೂರ್ಣಗೊಳಿಸಲಾಗಿದ್ದು, ಆಡಳಿತ ವ್ಯವಸ್ಥಾಪಕ ಎಸ್.ಕೆ. ಶ್ರೀನಿವಾಸರಾವ್ ಅವರು ಸೆಪ್ಟೆಂಬರ್ ತಿಂಗಳ 22 ದಿನಗಳ ಹುಂಡಿ ಕಾಣಿಕೆಯ ವಿವರಗಳನ್ನು ತಿಳಿಸಿದ್ದಾರೆ.

# ತಂದೆಯ ಪರಿಶ್ರಮಕ್ಕೆ ಮಗನ ಸಾಧನೆಯ ಸಾರ್ಥಕತೆ: ಅಕ್ಷಯ್ ಸರೋದೆಗೆ ಎಂಬಿಬಿಎಸ್ ಸೀಟ್



ದೇವದುರ್ಗ: ಸೀಮಿತ ಆದಾಯದ ನಡುವೆಯೂ ಮಕ್ಕಳ ಶಿಕ್ಷಣಕ್ಕೆ ಆದ್ಯತೆ ನೀಡಿ ದುಡಿದ ತಂದೆಯ ಪರಿಶ್ರಮಕ್ಕೆ ಪುತ್ರನ ಸಾಧನೆ ಸಾರ್ಥಕತೆ ತಂದುಕೊಟ್ಟಿದೆ. ಹಲವು ವರ್ಷಗಳಿಂದ ಪಂಚರ್ ಅಂಗಡಿ ನಡೆಸಿ ಕುಟುಂಬದ ಜೀವನ ಸಾಗಿಸುತ್ತಿರುವ ನರಸಿಂಗ್ ರಾವ್ ಸರೋದೆ ಅವರ ಪುತ್ರ ಅಕ್ಷಯ್ ಸರೋದೆ ಎಂಬಿಬಿಎಸ್ ವೈದ್ಯಕೀಯ ಕೋರ್ಸ್‌ಗೆ ಪ್ರವೇಶ ಪಡೆಯುವ ಮೂಲಕ ಗಮನಾರ್ಹ ಸಾಧನೆ ಮಾಡಿದ್ದಾರೆ.

ಪಂಚರ್ ಅಂಗಡಿಯಿಂದ ಬರುವ ಆದಾಯವನ್ನೇ ಕುಟುಂಬ ನಿರ್ವಹಣೆ ಹಾಗೂ ಮಕ್ಕಳ ಶಿಕ್ಷಣಕ್ಕೆ ಆಧಾರವಾಗಿಸಿಕೊಂಡ ನರಸಿಂಗ್ ರಾವ್ ಸರೋದೆ ಅವರು, ಆರ್ಥಿಕ ಸಂಕಷ್ಟಗಳ ನಡುವೆಯೂ ಮಕ್ಕಳ ವಿದ್ಯಾಭ್ಯಾಸಕ್ಕೆ ಅಡ್ಡಿಯಾಗದಂತೆ ಶ್ರಮಿಸಿದ್ದಾರೆ. ಅವರ ಮಗಳು ಪ್ರಸ್ತುತ 9ನೇ ತರಗತಿಯಲ್ಲಿ ಓದುತ್ತಿದ್ದು, ಪುತ್ರ ಅಕ್ಷಯ್ ನಿರಂತರ ಅಧ್ಯಯನ ಹಾಗೂ ಪರಿಶ್ರಮದ ಫಲವಾಗಿ ವೈದ್ಯಕೀಯ ಶಿಕ್ಷಣಕ್ಕೆ ಪ್ರವೇಶ ಪಡೆದಿದ್ದಾರೆ.

ಸಾಮಾನ್ಯ ಕುಟುಂಬದಲ್ಲಿ ಬೆಳೆದ ಅಕ್ಷಯ್ ಅವರ ಸಾಧನೆ ತಂದೆ-ತಾಯಿಯ ಹಲವು ವರ್ಷಗಳ ಶ್ರಮ ಹಾಗೂ ತ್ಯಾಗಕ್ಕೆ ದೊರೆತ ಪ್ರತಿಫಲವಾಗಿದೆ. ಮಗ ವೈದ್ಯನಾಗಬೇಕೆಂಬ ಕುಟುಂಬದ ಕನಸಿನ ಮೊದಲ ಹೆಜ್ಜೆ ಯಶಸ್ವಿಯಾಗಿದ್ದು, ಅಕ್ಷಯ್ ಅವರ ಸಾಧನೆ ಕುಟುಂಬದವರಲ್ಲಿ ಸಂತಸ ಮೂಡಿಸಿದೆ.

ಇದೇ ವೇಳೆ ವೈದ್ಯಕೀಯ ಶಿಕ್ಷಣದ ಮುಂದಿನ ಹಂತದಲ್ಲಿ ಕಾಲೇಜು ಶುಲ್ಕ, ಪುಸ್ತಕ, ವಸತಿ ಸೇರಿದಂತೆ ವಿವಿಧ ವೆಚ್ಚಗಳನ್ನು ಭರಿಸುವುದು ಕುಟುಂಬಕ್ಕೆ ಸವಾಲಾಗಿದೆ. ಪ್ರತಿಭಾವಂತ ವಿದ್ಯಾರ್ಥಿಯ ವೈದ್ಯಕೀಯ ಶಿಕ್ಷಣ ನಿರಾತಂಕವಾಗಿ ಮುಂದುವರಿಯಲು ಸಮಾಜದ ಸಹೃದಯರು ನೆರವಿನ ಹಸ್ತ ಚಾಚಿದರೆ ಅವರ ವೈದ್ಯನಾಗುವ ಕನಸಿಗೆ ಮತ್ತಷ್ಟು ಬಲ ಸಿಗಲಿದೆ ಎಂಬ ಆಶಯವನ್ನು ಸ್ನೇಹಿತರು ವ್ಯಕ್ತಪಡಿಸಿದರು.

ಅಕ್ಷಯ್ ಸರೋದೆ ಅವರ ಸಾಧನೆಯನ್ನು ಅಭಿನಂದಿಸಿ ಗೆಳೆಯರ ಬಳಗದ ವತಿಯಿಂದ ಸನ್ಮಾನಿಸಲಾಯಿತು. ವೈದ್ಯಕೀಯ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ ಭವಿಷ್ಯದಲ್ಲಿ ಉತ್ತಮ ವೈದ್ಯರಾಗಿ ಸಮಾಜಕ್ಕೆ ಸೇವೆ ಸಲ್ಲಿಸಲಿ ಎಂದು ಶುಭ ಹಾರೈಸಲಾಯಿತು.

ಈ ಸಂದರ್ಭದಲ್ಲಿ ಪ್ರವೀಣ್ ರೇವಣಿ, ಶರಣಬಸವ ರಾಮದುರ್ಗ, ಶಿಕ್ಷಕರಾದ ಕಲ್ಲಪ್ಪ ಹಾಗೂ ಮೈಲಾರಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬರ ಪರಿಹಾರ, ಭೂ ಮಂಜೂರಾತಿಗೆ ಅ.5ರಂದು ರಾಯಚೂರನಲ್ಲಿ ಅಹೋರಾತ್ರಿ ಧರಣಿ



ಲಿಂಗಸುಗೂರು: ಬರ ಪರಿಹಾರ, ಭೂ ಮಂಜೂರಾತಿ, ವಸತಿ ನಿವೇಶನ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಕರ್ನಾಟಕ ರೈತ ಸಂಘದ ರಾಯಚೂರು ಜಿಲ್ಲಾ ಸಮಿತಿ ವತಿಯಿಂದ ಅಕ್ಟೋಬರ್ 5ರಂದು ರಾಯಚೂರಿನ ಟಿಪ್ಪು ಸುಲ್ತಾನ್ ಗಾರ್ಡನ್‌ನಲ್ಲಿ ಅಹೋರಾತ್ರಿ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರೈತ ಸಂಘದ ರಾಯಚೂರು ಜಿಲ್ಲಾ ಅಧ್ಯಕ್ಷ ಅಶೋಕ ನೀಲಗಲ್ ಹೇಳಿದರು.

ಅವರು, ಸುದ್ದಿಗೋಷ್ಠಿಯಲ್ಲಿ ಮಾತನಡುತ್ತ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ನೀತಿಗಳಿಂದ ರೈತರು ಮತ್ತು ಬಡವರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಬರಪೀಡಿತ ರೈತರಿಗೆ ಸೂಕ್ತ ಪರಿಹಾರ, ರೈತರ ಸಾಲ ಮನ್ನಾ, ವರ್ಷಪೂರ್ತಿ ಉದ್ಯೋಗ ಖಾತ್ರಿ ಕೆಲಸ, ಉಚಿತ ಆಹಾರ ಧಾನ್ಯ ವಿತರಣೆ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಬೆಳೆ ನಷ್ಟಕ್ಕೆ ಖುಷ್ಕಿ ಭೂಮಿಗೆ ಎಕರೆಗೆ ₹30 ಸಾವಿರ ಹಾಗೂ ನೀರಾವರಿ ಭೂಮಿಗೆ ₹50 ಸಾವಿರ ಪರಿಹಾರ ನೀಡಬೇಕು. ಬರ ಘೋಷಣೆಯ ಮಾನದಂಡಗಳನ್ನು ಪರಿಷ್ಕರಿಸಲು ಕೇಂದ್ರ ಸರ್ಕಾರವನ್ನು ಒತ್ತಾಯಿಸಬೇಕು ಎಂದು ಆಗ್ರಹಿಸಿದರು.

ಜಿಲ್ಲೆಯಲ್ಲಿ ಹಲವು ವರ್ಷಗಳಿಂದ ಸರ್ಕಾರಿ ಹೆಚ್ಚುವರಿ ಭೂಮಿಯಲ್ಲಿ ಸಾಗುವಳಿ ಮಾಡುತ್ತಿರುವ ಭೂಹೀನರಿಗೆ ಭೂ ಮಂಜೂರಾತಿ, ಅರ್ಹರಿಗೆ 94ಸಿ/94ಸಿಸಿ ಅಡಿಯಲ್ಲಿ ಹಕ್ಕುಪತ್ರ, ವಸತಿ ನಿವೇಶನ ಹಾಗೂ ಸ್ಮಶಾನಕ್ಕೆ ಜಾಗ ಕಲ್ಪಿಸಬೇಕು. ಸರ್ಕಾರಿ ಭೂಮಿಯಲ್ಲಿ ಸಾಗುವಳಿ ಮಾಡುತ್ತಿರುವ ರೈತರನ್ನು ಒಕ್ಕಲೆಬ್ಬಿಸಬಾರದು ಎಂದು ಒತ್ತಾಯಿಸಿದರು.

ರಾಯಚೂರು ಜಿಲ್ಲೆಯ ವಿವಿಧ ತಾಲೂಕುಗಳ ಭೂ ಮಂಜೂರಾತಿ, ನಿವೇಶನ, ಸಾಲ ಮನ್ನಾ, ಕುಡಿಯುವ ನೀರು, ಸ್ಮಶಾನ ಸೇರಿದಂತೆ 24 ಪ್ರಮುಖ ಬೇಡಿಕೆಗಳ ಈಡೇರಿಕೆಗೆ ಹೋರಾಟ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಸಂಧರ್ಬದಲ್ಲಿ ಜಿಲ್ಲಾ ಉಪಾಧ್ಯಕ್ಷ ರಮೇಶ್ ಪಾಟಿಲ್ ಭೇರಿ, ಶೇಖರಯ್ಯ ಗೆಜ್ಜೆಲಗಟ್ಟಾ ಗೌಸ್ ಖಾನ್ ಕಾರ್ಯದರ್ಶಿ ಹುಲಿಗಪ್ಪ ಸಿರವಾರ, ಚಿಟ್ಟಿ ಬಾಬು ಸೇರಿದಂತೆ ಇದ್ದರು.

# ತುಂಗಭದ್ರಾ ನೀರಾವರಿ ಕಾರ್ಮಿಕರ ಬೇಡಿಕೆಗಳ ಕುರಿತು ಸಚಿವರೊಂದಿಗೆ ಮಹತ್ವದ ಸಭೆ




ಬೆಂಗಳೂರು, ಅ.1: ತುಂಗಭದ್ರಾ ನೀರಾವರಿ ಯೋಜನೆಯ ವಿವಿಧ ವಿಭಾಗಗಳಲ್ಲಿ ಕಳೆದ 2530 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಕಾರ್ಮಿಕರ ದೀರ್ಘಕಾಲದ ಸಮಸ್ಯೆಗಳು ಹಾಗೂ ವಿವಿಧ ಬೇಡಿಕೆಗಳ ಕುರಿತು ಜಲಸಂಪನ್ಮೂಲ ಸಚಿವ ಎನ್. ಚೆಲುವರಾಯಸ್ವಾಮಿ ನೇತೃತ್ವದಲ್ಲಿ ವಿಕಾಸಸೌಧದಲ್ಲಿ ಮಹತ್ವದ ಸಭೆ ನಡೆಯಿತು.

ವರ್ಷಪೂರ್ತಿ ನಿರಂತರ ಕೆಲಸ ಒದಗಿಸುವುದು, ಉದ್ಯೋಗ ಭದ್ರತೆ, 2026ರ ಜನವರಿಯಿಂದ ಬಾಕಿ ಇರುವ ವೇತನ ಪಾವತಿ, ಪಿಎಫ್ ಮತ್ತು ಇಎಸ್‌ಐ ಸಮಸ್ಯೆಗಳ ಪರಿಹಾರ, ಕಾರ್ಮಿಕ ಇಲಾಖೆ ಹಾಗೂ ನ್ಯಾಯಾಲಯದ ಆದೇಶಗಳ ಅನುಷ್ಠಾನ ಸೇರಿದಂತೆ ಹಲವು ವಿಷಯಗಳನ್ನು ಕಾರ್ಮಿಕರ ಪ್ರತಿನಿಧಿಗಳು ಸಭೆಯಲ್ಲಿ ಪ್ರಸ್ತಾಪಿಸಿದರು. ಟೆಂಡರ್ ಪ್ರಕ್ರಿಯೆಯ ವಿಳಂಬದಿಂದ ಕಾರ್ಮಿಕರಿಗೆ ಎದುರಾಗುತ್ತಿರುವ ಸಮಸ್ಯೆ ಹಾಗೂ ಗುತ್ತಿಗೆ ಪದ್ಧತಿಯ ಬದಲಿಗೆ ಕಾನೂನುಬದ್ಧ ನೇರ ವೇತನ ಪಾವತಿ ವ್ಯವಸ್ಥೆ ಜಾರಿಗೊಳಿಸುವ ಬಗ್ಗೆಯೂ ಚರ್ಚಿಸಲಾಯಿತು.

ಆಗಸ್ಟ್ 19ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಡೆದ ಪ್ರತಿಭಟನೆ ಸಂದರ್ಭದಲ್ಲಿ ಸರ್ಕಾರದ ಪ್ರತಿನಿಧಿಗಳು ನೀಡಿದ್ದ ಭರವಸೆಗಳನ್ನು ನೆನಪಿಸಿದ ಕಾರ್ಮಿಕ ಮುಖಂಡರು, ಹಲವು ವರ್ಷಗಳಿಂದ ನೀರಾವರಿ ನಿರ್ವಹಣೆಯ ಒಂದೇ ಸ್ವರೂಪದ ಕೆಲಸ ಮಾಡುತ್ತಿರುವ ಕಾರ್ಮಿಕರಿಗೆ ಉದ್ಯೋಗ ಭದ್ರತೆ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಕಾರ್ಮಿಕರ ಅಹವಾಲುಗಳನ್ನು ಆಲಿಸಿದ ಸಚಿವ ಎನ್. ಚೆಲುವರಾಯಸ್ವಾಮಿ, ಬೇಡಿಕೆಗಳಿಗೆ ಸಂಬಂಧಿಸಿದಂತೆ ಅಗತ್ಯ ಕ್ರಮ ಕೈಗೊಳ್ಳುವ ಭರವಸೆ ನೀಡಿದರು. ಸಭೆಯಲ್ಲಿ ಭಾಗವಹಿಸಿದ್ದ ರಾಯಚೂರು ಜಿಲ್ಲಾ ಉಸ್ತುವಾರಿ ಹಾಗೂ ಸಣ್ಣ ನೀರಾವರಿ ಸಚಿವ ಡಾ. ಅಜಯ್ ಸಿಂಗ್ ಮತ್ತು ವಿಧಾನ ಪರಿಷತ್ ಸದಸ್ಯ, ಮಾಜಿ ಸಚಿವ ಎನ್. ಎಸ್. ಬೋಸರಾಜು ಅವರು ಸಮಸ್ಯೆಗಳ ಪರಿಹಾರಕ್ಕೆ ಸಹಕಾರ ನೀಡುವುದಾಗಿ ತಿಳಿಸಿದರು.

ಕರ್ನಾಟಕ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಬಿ.ಆರ್. ರಾಥೋಡ್, ಅಧೀಕ್ಷಕ ಅಭಿಯಂತರರಾದ ಶ್ರೀನಿವಾಸ ಮಲ್ಲಿಗೆವಾಡ, ಸತ್ಯನಾರಾಯಣ ಶೆಟ್ಟಿ, ಕಾರ್ಯಪಾಲಕ ಅಭಿಯಂತರರಾದ ನಾಗನಾಥ, ಬಸಪ್ಪ ಜನಕರ್ ಸೇರಿದಂತೆ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘದ ಅಧ್ಯಕ್ಷ ಕೆ. ನಾಗಲಿಂಗಸ್ವಾಮಿ, ಎಐಸಿಸಿಟಿಯು ರಾಜ್ಯ ಪ್ರಧಾನ ಕಾರ್ಯದರ್ಶಿ ಮೈತ್ರೇಯಿ ಕೃಷ್ಣನ್, ರಾಜ್ಯ ಸಹ ಕಾರ್ಯದರ್ಶಿ ನಾಗರಾಜ ಪೂಜಾರ, ಸಂಘದ ಪ್ರಧಾನ ಕಾರ್ಯದರ್ಶಿ ಎಂ. ಬಸವರಾಜ, ಅಜಿಜ್ ಜಾಗೀರದಾ,ರ್ ಶರಣಬಸವ, ಜಡೆ ವೆಂಕಟೇಶ್, ಹುಚ್ಚಯ್ಯಸ್ವಾಮಿ, ಜಲೀಲ್ ಪಾಷಾ, ಶೇಖಪ್ಪ, ಚಂದು ಸಾಬ್, ಗಾದಿಲಿಂಗಪ್ಪ, ಜಡೆಪ್ಪ, ಆನಂದ ಸೇರಿದಂತೆ ಕಾರ್ಮಿಕ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಕಾರ್ಮಿಕರ ಸಮಸ್ಯೆಗಳಿಗೆ ಸ್ಪಂದಿಸಿ ಸಭೆ ನಡೆಸಲು ಸಹಕರಿಸಿದ ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಸಿಂಗ್ ಹಾಗೂ ಮಾಜಿ ಸಚಿವ ಎನ್.ಎಸ್. ಬೋಸರಾಜು ಅವರಿಗೆ ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘ ಕೃತಜ್ಞತೆ ಸಲ್ಲಿಸಿದೆ. ಸಭೆಯಲ್ಲಿ ನೀಡಿರುವ ಭರವಸೆಗಳು ಶೀಘ್ರ ಆಡಳಿತಾತ್ಮಕ ಕ್ರಮ ಹಾಗೂ ಅಧಿಕೃತ ಆದೇಶಗಳಾಗಿ ಜಾರಿಯಾಗಬೇಕು ಎಂದು ಸಂಘ ಒತ್ತಾಯಿಸಿದೆ.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K